ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಉದಯಗಿರಿ ಸತ್ಯದ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily

SP NEWS ಡಿಜಿಟಲ್ ನ್ಯೂಸ್ ಚಾನಲ್

ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue:151 ಸಂಚಿಕೆ: 151 | Date:02-07-2026 Thursday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

## ಸಹಾಯಧನ ಸೌಲಭ್ಯಕ್ಕಾಗಿ ಮೀನುಗಾರರಿಂದ ಅರ್ಜಿ ಆಹ್ವಾನ

ತುಮಕೂರು: ಜಿಲ್ಲಾ ಮೀನುಗಾರಿಕೆ ಇಲಾಖಾ ವತಿಯಿಂದ 2026–27ನೇ ಸಾಲಿನಲ್ಲಿ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯ ಧರ್ತಿ ಆಭಾ ಜನ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನ (DAJGUA) ಯೋಜನೆಯಡಿ ಜೀವಂತ ಮೀನು ಮಾರಾಟ ಮಳಿಗೆ ತೆರೆಯಲು ಸಹಾಯಧನ ಸೌಲಭ್ಯ ಕಲ್ಪಿಸಲು ಮೀನುಗಾರಿಕೆಯಲ್ಲಿ ತೊಡಗಿರುವ ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಕೇಂದ್ರ ಸರ್ಕಾರವು ನೀಡಿರುವ ಪಟ್ಟಿಯಲ್ಲಿರುವ ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ದೊಡ್ಡಹುಲ್ಲೇನಹಳ್ಳಿ ಮಾದಾಪುರ ಹಂದಿಗನಾಡು ಹಾಗೂ ಜಾಣೇಹಾರ್; ಶಿರಾ ತಾಲ್ಲೂಕಿನ ಕುಂಬಾರಹಳ್ಳಿ, ಮಾರಗೊಂಡನಹಳ್ಳಿ ಬಟ್ಟಿಗಾನಹಳ್ಳಿ, ಸಿಡ್ಲಕೋಣ, ಜೋಡಿದೇವರಹಳ್ಳಿ, ಸಲುಪರಹಳ್ಳಿ; ಪಾವಗಡ ತಾಲ್ಲೂಕಿನ ದಳವಾಯಿಹಳ್ಳಿ, ಹೊಸದುರ್ಗ, ಹನುಮನಬೆಟ್ಟ, ರಂಗಸಮುದ್ರ, ಬೆಳ್ಳಿಬಟ್ಟಲು, ಹನುಮಂತನಹಳ್ಳಿ, ಹೊಟ್ಟೆಬೊಮ್ಮನಹಳ್ಳಿ; ಮಧುಗಿರಿ ತಾಲ್ಲೂಕಿನ ಬಸವನಹಳ್ಳಿ, ವಿಟ್ಲಾಪುರ, ಗುಟ್ಟೆ, ಮುತ್ಯಾಲಮ್ಮನಹಳ್ಳಿ; ಕೊರಟಗೆರೆ ತಾಲ್ಲೂಕಿನ ಹಂಚಿಹಳ್ಳಿ; ತುಮಕೂರು ತಾಲ್ಲೂಕಿನ ಲಿಂಗೇನಹಳ್ಳಿ, ದೊಡ್ಡವೀರನಹಳ್ಳಿ, ಕುಪ್ಪೂರು; ಗುಬ್ಬಿ ತಾಲ್ಲೂಕಿನ ಉಂಗನಾಳ, ಕಲ್ಲುಗುಡಿ, ಜಾಲಗುಣಿ, ಸಾಗಸಂದ್ರ ಗ್ರಾಮಗಳಲ್ಲಿ ಮೀನುಗಾರಿಕೆಯಲ್ಲಿ ತೊಡಗಿರುವ ಆಸಕ್ತರು ಜುಲೈ 14ರೊಳಗಾಗಿ ಸಸಹಾಯಧನ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ತುಮಕೂರು, ಚಿಕ್ಕನಾಯಕನಹಳ್ಳಿ, ಶಿರಾ, ಪಾವಗಡ, ಕೊರಟಗೆರೆ, ಮಧುಗಿರಿ ಮತ್ತು ಗುಬ್ಬಿ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ ಎಂದು ಮೀನುಗಾರಿಕೆ ಉಪನಿರ್ದೇಶಕ. ನಂಜುಂಡಪ್ಪ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 22 ದೇವಸ್ಥಾನ ಕಳ್ಳತನ ಪ್ರಕರಣ:6 ಅಂತರ್ ಜಿಲ್ಲಾ ಕಳ್ಳರ ಬಂಧನ



ತುಮಕೂರು: ಜಿಲ್ಲೆಯ ವಿವಿಧ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದೇವಸ್ಥಾನಗಳನ್ನು ಗುರಿಯಾಗಿಸಿಕೊಂಡು ಕಳ್ಳತನ ನಡೆಸುತ್ತಿದ್ದ ಅಂತರ್ ಜಿಲ್ಲಾ ಕುಖ್ಯಾತ ಕಳ್ಳರ ತಂಡವನ್ನು ತುರುವೇಕೆರೆ ಪೊಲೀಸರು ಬಂಧಿಸಿ 22 ದೇವಸ್ಥಾನ ಕಳ್ಳತನ ಪ್ರಕರಣಗಳನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಹಾಸನ ಜಿಲ್ಲೆಯ ಚನ್ನರಾಯಪಟ್ಟಣದ ಹಿರಿಸಾವೆಯ ಲಯನ್ ಅಲಿಯಾಸ್ ಎಟಿಎಂ ಕುಳ್ಳ (29), ಮಧುಸೂಧನ ಅಲಿಯಾಸ್ ಮಧು, ರಾಮನಗರ ಜಿಲ್ಲೆಯ ಜೋಗಿಪಾಳ್ಯದ ಮಂಜುನಾಥ್ ಅಲಿಯಾಸ್ ಮಾಗಡಿ ಮಂಜ (28), ಮಂಡ್ಯ ಜಿಲ್ಲೆಯ ನಾಗಮಂಗಲದ ಗೊಂಡೇನಹಳ್ಳಿಯ ಚಂದನ (19), ಮಂಡ್ಯ ಜಿಲ್ಲೆಯ ನಾಗಮಂಗಲದ ಲೇಔಟ್‌ನ ಬಾಬು ಅಲಿಯಾಸ್ ಗುರು (22), ಗೊಂಡೇನಹಳ್ಳಿಯ ನರಸಿಂಹಮೂರ್ತಿ ಅಲಿಯಾಸ್ ಕರಿಯಾ (32) ಎಂಬುವರನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಜೂನ್ 19 ರಂದು ರಾತ್ರಿ ಸುಮಾರು 8.45ರ ವೇಳೆಗೆ ತುರುವೇಕೆರೆ ತಾಲ್ಲೂಕಿನ ಮಾಯಸಂದ್ರ ಹೋಬಳಿಯ ಜೋಡುಗಟ್ಟೆ ಗ್ರಾಮದ ಸಮೀಪ ಬಸ್ ನಿಲ್ದಾಣದ ಬಳಿ ಐದಾರು ಮಂದಿ ದರೋಡೆಗೆ ಸಿದ್ಧತೆ ನಡೆಸುತ್ತಿದ್ದ ಮಾಹಿತಿ ಮೇರೆಗೆ ಪೊಲೀಸರು ದಾಳಿ ನಡೆಸಿದರು. ಖಾರದ ಪುಡಿ, ಕಬ್ಬಿಣದ ಚಾಕು, ಲಾಂಗು ಸೇರಿದಂತೆ ಮಾರಕಾಸ್ತ್ರಗಳೊಂದಿಗೆ ದರೋಡೆಗೆ ಸಂಚು ರೂಪಿಸುತ್ತಿದ್ದ ಆರೋಪಿಗಳನ್ನು ಬಂಧಿಸಿ, ಅವರ ವಿರುದ್ಧ ತುರುವೇಕೆರೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಯಿತು ಎಂದು ಅವರು ವಿವರಿಸಿದರು.

ಬಂಧಿತ ಆರೋಪಿಗಳನ್ನು ತೀವ್ರ ವಿಚಾರಣೆಗೆ ಒಳಪಡಿಸಿದಾಗ, ತುರುವೇಕೆರೆ, ದಂಡಿನಶಿವರ, ಕುಣಿಗಲ್, ಅಮೃತೂರು, ಮಿಡಿಗೇಶಿ, ತಿಪಟೂರು ಗ್ರಾಮಾಂತರ, ಕೊಡಿಗೇನಹಳ್ಳಿ, ಚಿಕ್ಕನಾಯಕನಹಳ್ಳಿ, ಕೆ.ಬಿ. ಕ್ರಾಸ್, ಸಿರಾ, ಸಿ.ಎಸ್.ಪುರ, ಕುದೂರು ಹಾಗೂ ಬಿಂಡಿಗನವಿಲೆ ಪೊಲೀಸ್ ಠಾಣೆ ವ್ಯಾಪ್ತಿಯ ದೇವಸ್ಥಾನಗಳಲ್ಲಿ ರಾತ್ರಿ ವೇಳೆ ಬೀಗ ಮುರಿದು ದೇವರ ಚಿನ್ನದ ತಾಳಿ, ಚಿನ್ನ–ಬೆಳ್ಳಿ ಆಭರಣಗಳು ಹಾಗೂ ಹುಂಡಿ ಹಣ ಕಳವು ಮಾಡಿರುವುದು ಬೆಳಕಿಗೆ ಬಂದಿದೆ ಎಂದರು.

ಒಟ್ಟು 22 ದೇವಸ್ಥಾನ ಕಳ್ಳತನ ಪ್ರಕರಣಗಳು ಹಾಗೂ ತುರುವೇಕೆರೆ ಠಾಣಾ ವ್ಯಾಪ್ತಿಯ ಬೆನಕನಕೆರೆ ಗ್ರಾಮದ ವಿದ್ಯಾರಣ್ಯ ಪ್ರೌಢಶಾಲೆಯಲ್ಲಿ ನಡೆದ ಕಳ್ಳತನ ಪ್ರಕರಣವೂ ಇದೇ ತಂಡಧಿಂದ ನಡೆದಿರುವುದು ತನಿಖೆಯಲ್ಲಿ ದೃಢಪಟ್ಟಿದೆ ಎಂದು ಅವರು ಹೇಳಿದರು.

ಆರೋಪಿಗಳಿಂದ ಒಟ್ಟು 86 ಗ್ರಾಂ ತೂಕದ 25 ಚಿನ್ನದ ತಾಳಿಗಳು, ಇತರೆ ಚಿನ್ನದ ಆಭರಣಗಳು, ಮೂರು ಬೈಕ್‌ಗಳು, ಒಂದು ಆಟೋ ಹಾಗೂ ಎರಡು ಗ್ಯಾಸ್ ಸಿಲಿಂಡರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ಆಸ್ತಿಯ ಒಟ್ಟು ಮೌಲ್ಯ 14.19 ಲಕ್ಷ ಎಂದು ಅವರು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಅಡಿಷನಲ್ ಎಸ್ಪಿ ಪುರುಷೋತ್ತಮ್, ಡಿವೈಎಸ್ಪಿಗಳಾದ ಬಿ.ಕೆ. ಶೇಖರ್, ಓಂಪ್ರಕಾಶ್ ಉಪಸ್ಥಿತರಿದ್ದರು.

## ಉಪನ್ಯಾಸಕಿ ಜಯಲಕ್ಷ್ಮಿ ನಿವೃತ್ತಿ

ಬರಗೂರು :ಶಿಸ್ತಿನ ಶಾಲೆಯಲ್ಲಿ ಉತ್ತಮ ಸೇವೆ ನೀಡಿದ ತೃಪ್ತಿ ನನಗಿದೆ ಎಂದು ನಿವೃತ್ತಿ ಹೊಂದಿದ ಉಪನ್ಯಾಸಕಿ ಜಯಲಕ್ಷ್ಮಿ ತಿಳಿಸಿದರು.



ಶಿರಾ ತಾಲೂಕು ಬರಗೂರಿನ ಶ್ರೀ ಆಂಜನೇಯ ಸ್ವಾಮಿ ಗ್ರಾಮಾಂತರ ವಿದ್ಯಾವರ್ಧಕ ಸಂಸ್ಥೆಯ ಕಾಲೇಜಿನಲ್ಲಿ ಬುಧವಾರ ಆಯೋಜಿಸಿದ ಸೇವೆಯಿಂದ ವಯೋನಿವೃತ್ತಿ ಬೀಳ್ಕೊಡುಗೆ ಸಮಾರಂಭದಲ್ಲಿ ಸಂಸ್ಥೆ ಮತ್ತು ವಿದ್ಯಾರ್ಥಿಗಳಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ 33 ವರ್ಷಗಳ ಕಾಲ ಈ ಸಂಸ್ಥೆಯಲ್ಲಿ ಸುಧೀರ್ಘ ಸೇವೆ ನೀಡುವುದರ ಮೂಲಕ ತಮ್ಮ ಫಲಿತಾಂಶ ಲಭಿಸುವಲ್ಲಿ ಜವಾಬ್ದಾರಿಯುತನ ಕೆಲಸ ನಿರ್ವಹಿಸಿದ್ದೇನೆ ಎಂದರು.

ಜ್ಞಾನ ಜ್ಯೋತಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಿ ಎನ್ ಪರಮೇಶ್ ಗೌಡ ಮಾತನಾಡಿದರು.ಸಂಸ್ಥೆ ಅಧ್ಯಕ್ಷ ಪ್ರಕಾಶ್ ಗೌಡ ಮಾತನಾಡಿ ನಮ್ಮ ಸಂಸ್ಥೆಯಲ್ಲಿ ಉತ್ತಮವಾದ ಸೇವೆ ನೀಡಿ ಸಂಸ್ಥೆಯ ಗೌರವವನ್ನು ಉಳಿಸಿ ಬೆಳೆಸಿದ್ದಾರೆ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಉತ್ತೇಜನ ನೀಡುವ ಮೂಲಕ ವಿದ್ಯಾರ್ಥಿಗಳ ಭವಿಷ್ಯಕ್ಕೆ ಭದ್ರ ಬುನಾದಿಯಾಗಿತ್ತು ಎಂದರು. ಸಂಸ್ಥೆಯ ದೇವರಾಜ್, ಬಿ ಮರಿಯಪ್ಪ, ಪ್ರಾಂಶುಪಾಲರಾದ ಜಯಪ್ರಕಾಶ್ ಉಪನ್ಯಾಸಕರಾದ ಓಂಕಾರ್, ನಾಗರಾಜ್, ವಿಶ್ವನಾಥ್, ಡಾಕ್ಟರ್ ನಂದೀಶ್, ವಿದ್ಯಾರ್ಥಿಗಳು ಇದ್ದರು



ತುಮಕೂರಿನ ಪತ್ರಕರ್ತ ರಾದ ಎಸ್. ಹರೀಶ್ ಆಚಾರ್ಯ ಅವರು ಕೃಷಿ ಸಂವಹನ ಅಧ್ಯಯನ ವಿಷಯವಾಗಿ ಮಾಧ್ಯಮ ಅಕಾಡೆಮಿ ಫೆಲೋಷಿಪ್ ಗೌರವಕ್ಕೆ ಭಾಜನರಾಗಿದ್ದು ಬೆಂಗಳೂರಿನ ಗಾಂಧಿ ಭವನದಲ್ಲಿ ಜರುಗಿದ ಪತ್ರಿಕಾ ದಿನಾಚರಣೆಯಲ್ಲಿ ಮಾಜಿ ಸಚಿವ ಹಾಗೂ ಶಾಸಕ ದಿನೇಶ್ ಗುಂಡೂರಾವ್ ಅವರಿಂದ ಪ್ರಮಾಣ ಪತ್ರ ಸ್ವೀಕರಿಸಿದ ರು. ವಾರ್ತಾ ಇಲಾಖೆ ಆಯುಕ್ತ ರಾದ ಅನುಚೇತ್, ಹಿರಿಯ ಪತ್ರಕರ್ತ ರಾದ ಅ ಬ್ದುಸ್ಸಲೇಂ ಪುತ್ತಿಗೆ, ಕೆಯುಡಬ್ಲ್ಯುಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ಡಾ. ವೂಡೇ ಪಿ ಕೃಷ್ಣ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಅಕಾಡೆಮಿ ಅಧ್ಯಕ್ಷರಾದ ಆಯಿಷಾಖಾನಂ, ಶ್ರೀ ನಿವಾಸರೆಡ್ಡಿ, ಡಾ. ಪೂರ್ಣಿಮಾ, ಅಕಾಡೆಮಿ ಕಾರ್ಯದರ್ಶಿ ಸಹನಾ ಇತರರಿದ್ದರು.

# ಎತ್ತಿನ ಹೊಳೆ:ಅಕ್ಟೋಬರ್ ವೇಳೆಗೆ ತುಮಕೂರುವರೆಗೆ ಹರಿಯಲಿದೆ ನೀರು

ತುಮಕೂರು: ಬರುವ ಅಕ್ಟೋಬರ್ ವೇಳೆಗೆ ತುಮಕೂರುವರೆಗೆ ಎತ್ತಿನಹೊಳೆ ನೀರು ಹರಿಯಲಿದೆ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ.

ಮಹತ್ವದ ಎತ್ತಿನಹೊಳೆ ಯೋಜನೆ ಕಾಮಗಾರಿ ಪರಿಶೀಲನೆ ಸಂಬಂಧ ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಪ್ಯಾಕೇಜ್ 11 ಕಂಚಿಗಾನಹಳ್ಳಿ, ಮಾರಶೆಟ್ಟಿಹಳ್ಳಿ ಅರಣ್ಯ ಪ್ರದೇಶಕ್ಕೆ ಬುಧವಾರ ಭೇಟಿ ನೀಡಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಮಹತ್ವದ ಎತ್ತಿನಹೊಳೆ ಯೋಜನೆ ಕಾಮಗಾರಿ ಒಟ್ಟು 252 ಕಿ.ಮೀ.ಇದ್ದು, ಈಗಾಗಲೇ 220 ಕಿ.ಮೀ. ಕಾಮಗಾರಿ ಪೂರ್ಣಗೊಂಡಿದೆ. 23 ಕಿ.ಮೀ. ಕಾಮಗಾರಿ ಪ್ರಗತಿಯಲ್ಲಿದೆ. ಬಾಕಿ 9 ಕಿ.ಮೀ. ಕಾಮಗಾರಿ ಆಗಬೇಕಿದೆ. ಈ ವ್ಯಾಪ್ತಿಯಲ್ಲಿ 6 ಕಿ.ಮೀ. ಅರಣ್ಯ ಪ್ರದೇಶ ಇದ್ದುದರಿಂದ ಕಾಮಗಾರಿ ವಿಳಂಬಕ್ಕೆ ಕಾರಣವಾಯಿತು. ಇದೀಗ ಕೇಂದ್ರ ಸರ್ಕಾರ ಪ್ರಕರಣವನ್ನು ಇತ್ಯರ್ಥಗೊಳಿಸಿದ್ದು, ಕಾಮಗಾರಿ ಪೂರ್ಣಗೊಂಡು ಅಕ್ಟೋಬರ್ ವೇಳೆಗೆ ತುಮಕೂರಿನವರೆಗೆ ಎತ್ತಿನಹೊಳೆ ನೀರು ಹರಿಸುವ ಎಲ್ಲಾ ಸಾಧ್ಯತೆಗಳಿವೆ ಎಂದು ಅವರು ತಿಳಿಸಿದರು.

ಮಾರಶೆಟ್ಟಿಹಳ್ಳಿ ಅರಣ್ಯ ವ್ಯಾಪ್ತಿಯಲ್ಲಿ 1.9 ಕಿ.ಮೀ. ಕಾಲುವೆ ಹಾದು ಹೋಗಲಿದ್ದು, ಕಾಮ ಗಾರಿ ವಿಳಂಬವಾಗಿತ್ತು. ಇದೀಗ ಎಲ್ಲಾ ತೊಡಕುಗಳು ಇತ್ಯರ್ಥವಾಗಿದ್ದು, ಜಿಲ್ಲಾ ಅರಣ್ಯ ಉಪ ಸಂರಕ್ಷಣಾಧಿಕಾರಿ ಅವರು ಮರ ಕಡಿಯಲು ಈಗಾಗಲೇ ಕಾರ್ಯಾದೇಶ ನೀಡಿದ್ದಾರೆ. ಅರಣ್ಯದಲ್ಲಿನ ಪ್ರಾಣಿ, ಪಕ್ಷಿಗಳಿಗೆ ಯಾವುದೇ ತೊಂದರೆ ಂ ು ಾ ಗ ದ ಂ ತೆ ಮುಚ್ಚಿದ ಕಾಲುವೆಯನ್ನು ನಿರ್ಮಿಸುವ ಷರತ್ತಿಗೊಳಪಟ್ಟು ಅನುಮತಿ ಇರುವುದರಿಂದ ಈ ಅರಣ್ಯ ಪ್ರದೇಶದಲ್ಲಿ ಮುಚ್ಚಿದ ಕಾಲುವೆಯ ಕಾಮಗಾರಿಯನ್ನು ತಕ್ಷಣ ಆರಂಭಿಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ಮುಂದಿನ 100 ದಿನಗಳಲ್ಲಿ ಒಟ್ಟಾರೆ 174 ಕಿ.ಮೀ. ಕಾಮಗಾರಿ ಪೂರ್ಣಗೊಳಿಸಲು ಸೂಚಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಪ್ರಸಕ್ತ ವರ್ಷ ಮುಂಗಾರು ಮಳೆ ಕ್ಷೀಣಿಸುತ್ತಿರುವುದು ಆತಂಕದ ಸಂದರ್ಭವನ್ನು ಸೃಷ್ಟಿಸಿದೆ ಎಂದ ಅವರು, ಮಧ್ಯ ಭಾರತದ ಸುಮಾರು 12 ರಾಜ್ಯಗಳಿಗೆ ಈ ಬಾರಿ ಮಳೆ ಕೊರತೆಯಾಗಿದೆ. ಕಳೆದ ವರ್ಷ ಈ ದಿನಗಳಿಗೆ ರಾಜ್ಯದ ಎಲ್ಲಾ ಕೆರೆ–ಕಟ್ಟೆಗಳು ತುಂಬಿದ್ದವು. ಆದರೆ, ಪ್ರಸಕ್ತ ಸಾಲಿನಲ್ಲಿ ಮಳೆಯ ಕೊರತೆಯಿಂದಾಗಿ ರಾಜ್ಯ ಸಂಕಷ್ಟ ಎದುರಿಸಬೇಕಾಗಿದೆ. ಪ್ರಸ್ತುತ ಮುಂದಿನ 2 ತಿಂಗಳವರೆಗೆ ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಿಲ್ಲ. ಆದರೆ ಬೇಸಾಯಕ್ಕೆ ಮಳೆಯ ಅವಶ್ಯಕತೆ ಇದೆ ಎಂದು ಅವರು ತಿಳಿಸಿದರು.



ತುಮಕೂರಿನ ಹೇಮಾವತಿ ಲಿಂಕ್ ಕೆನಾಲ್ ಯೋಜನೆಯ ಗೊಂದಲಗಳ ಸಂಬಂಧಿಸಿದಂತೆ ಉಪ ಮುಖ್ಯಮಂತ್ರಿಗಳು ಹಾಗೂ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ತೀರ್ಮಾನಿಸಲಾಗುವುದು ಎಂದ ಅವರು, ಯೋಜನೆಯ ಕುರಿತು ಉಭಯ ನಾಯಕರಲ್ಲಿ ಯಾವುದೇ ಗೊಂದಲಗಳಿಲ್ಲ. ಯೋಜನೆಯನ್ನು ಅನುಷ್ಠಾನಗೊಳಿಸುವ ಎಲ್ಲಾ ಪ್ರಯತ್ನ ಮಾಡಲಾಗುವುದು ಎಂದು ಸಚಿವರು ತಿಳಿಸಿದರು. ಈ ಸಂದರ್ಭದಲ್ಲಿ ಹೇಮಾವತಿ ನಾಲಾ ಯೋಜನೆಯ ಮುಖ್ಯ ಇಂಜಿನಿಯರ್ ಹೆಚ್.ಎಸ್. ಆನಂದ್, ಕಾರ್ಯಪಾಲಕ ಇಂಜಿನಿಯರ್ ಮುರುಳೀಧರ್, ಸಹಾಯಕ ಇಂಜಿನಿಯರ್ ಶಶಾಂಕ್, ತಹಶೀಲ್ದಾರ್ ಆರತಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕ ಪುರುಷೋತ್ತಮ್ ಮತ್ತಿತರರು ಉಪಸ್ಥಿತರಿದ್ದರು.

## ಪತ್ರಿಕಾ ದಿನ ಆಚರಿಸಿದ ಅಶ್ವಥ್‌ನಾರಾಯಣ್

ತಿಪಟೂರು : ಸಮಾಜವನ್ನು ತಿದ್ದುವ ಕಾಯಕದಲ್ಲಿ ನಿರತರಾಗಿ, ಸತ್ಯ ತಿಳಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವ ಪತ್ರಕರ್ತರ ದಿನ ಪತ್ರಿಕಾದಿನಾಚರಣೆಯನ್ನು ಆಚರಿಸುವುದು ಎಲ್ಲರ ನಮ್ಮ ಕರ್ತವ್ಯ ಎಂದು ಮಾಜಿ ಜಿ.ಪಂ ಸದಸ್ಯ ಅಶ್ವಥ್‌ನಾರಾಯಣ್ ತಿಳಿಸಿದರು.

ನಗರದ ಮಂಜುನಾಥನಗರದಲ್ಲಿರುವ ತಮ್ಮ ಸ್ವಗೃಹದಲ್ಲಿ ಎಲ್ಲಾ ಪತ್ರಕರ್ತರನ್ನು ಆಹ್ವಾನಿಸಿ ಪತ್ರಿಕಾದಿನವನ್ನು ಆಚರಿಸಿ ಮಾತನಾಡಿದ ಅವರು ದಶಕದ ಹಿಂದೆ ಪತ್ರಿಕೆ ಓದದೆ ದಿನವನ್ನು ಯಾರೂ ಆರಂಭಿಸುತ್ತಿರಲಿಲ್ಲ ಇಂದಿನ ಸಾಮಾಜಿಕ ಮಾಧ್ಯಮದಿಂದ ಪತ್ರಿಕೆ ಓದುವವರ ಸಂಖ್ಯೆ ಕಡಿಮೆಯಾಗಿರಬಹುದು ಆದರೆ ಹೇಗೆ ಒಂದು ಕ್ಯಾಮರ ಕೇವಲ ಚಿತ್ರವನ್ನು ಸೆರಿಹಿಡಿಯುವುದಿಲ್ಲ ಅದು



ಇತಿಹಾಸವನ್ನು ಸೆರೆಹಿಡಿಯುತ್ತದೆ ಎಂದ ಅವರು ಅದೇ ರೀತಿ ದನ ಪತ್ರಿಕೆಗಳು ಇತಿಹಾಸದ ದಾಖಲೆಗಳಾಗುತ್ತವೆ. ಇನ್ನು ತಾಲ್ಲೂಕಿನ ಪತ್ರಕರ್ತರು ಇಂತಹ ಇತಿಹಾಸ ರಚಿಸುವ ಕಾಯಕದಲ್ಲಿದ್ದು ತಮ್ಮ ವೃತ್ತಿಯ ಘನತೆಯನ್ನು ಮರೆಯಬಾರದೆಂದು ಕಿವಿಮಾತನ್ನು ಹೇಳಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಯಾನಂದ್ ಹಾಗೂ ಪ್ರಧಾನ ಕಾರ್ಯದರ್ಶಿ ಸಿದ್ದೇಶ್ವರ ರನ್ನು ಸನ್ಮಾನಿಸಿದರು. ಕಾರ್ಯಕ್ರಮದಲ್ಲಿ ರೈತ ಸಂಘದ ಬಸ್ತಿಹಳ್ಳಿ ರಾಜಣ್ಣ, ಮಾಜಿ ತಾ.ಪಂ ಅಧ್ಯಕ್ಷ ವಿರೂಪಾಕ್ಷ, ಚಿದಾನಂದ್, ಮಂಜುನಾಥ್ ಸೇರಿದಂತೆ ಹಲವರು ಮತ್ತು ಪತ್ರಕರ್ತರು ಭಾಗವಹಿಸಿದ್ದರು.

# ನಗರದ ಬೀಡಿ ಕಾಲೋನಿಯ ರಸ್ತೆ ಅಭಿವೃದ್ಧಿ

ಶಿರಾ : ನಗರದ ಅಭಿವೃದ್ಧಿ, ಸ್ವಚ್ಛತೆ ಪ್ರಥಮ ಆದ್ಯತೆಯಾಗಿದ್ದು, ಬಹು ವರ್ಷಗಳಿಂದ ನಗರದ ಬೀಡಿ ಕಾಲೋನಿ ನಿವಾಸಿಗಳಿಗೆ ರಸ್ತೆ ಅಭಿವೃದ್ಧಿಪಡಿಸಿ ಎಂದು ಹಲವಾರು ಬಾರಿ ಮನವಿ ಮಾಡಿದ್ದರು, ಶಾಸಕ ಟಿ.ಬಿ. ಜಯಚಂದ್ರರವರ ಸಹಕಾರದೊಂದಿಗೆ

80 ಲಕ್ಷ ರೂಪಾಯಿ ವೆಚ್ಚದಲ್ಲಿ ಬೀಡಿ ಕಾಲೋನಿಗೆ ಸಿಸಿ ರಸ್ತೆ ನಿರ್ಮಾಣ ಕಾಮಗಾರಿ ಮಾಡುತ್ತಿರುವುದು ಹೆಚ್ಚು ವರ್ಷ ನೀಡುತ್ತದೆ, ಕಾಮಗಾರಿಯ ಗುಣಮಟ್ಟ ಕಾಪಾಡುವಂತೆ ಸೂಚಿಸಲಾಗಿದೆ ಎಂದು ನಗರಸಭೆ ಅಧ್ಯಕ್ಷ ಜಿಶಾನ್ ಮೊಹಮ್ಮದ್ ಹೇಳಿದರು.

ಶಿರಾ ನಗರದ ಬೀಡಿ ಕಾಲೋನಿಯಲ್ಲಿ ರಾಜೀವ್ ಗಾಂಧಿ ಹೌಸಿಂಗ್ ಕಾರ್ಪೊರೇಷನ್ ವತಿಯಿಂದ 80 ಲಕ್ಷ ರೂಪಾಯಿ ಅನುದಾನದಲ್ಲಿ ಸಿಸಿ ರಸ್ತೆ ಕಾಮಗಾರಿ ನಡೆಯುತ್ತಿದ್ದು, ಕಾಮಗಾರಿ ಗುಣಮಟ್ಟ



ಪರಿಶೀಲ ನಡೆಸಿ ಮಾತನಾಡಿದರು.

ಶಿರಾ ಶಾಸಕ ಟಿ.ಬಿ. ಜಯ ಚಂದ್ರರವರ ಮಾರ್ಗದರ್ಶನದಲ್ಲಿ ಶಿರಾ ನಗರದ ಹಲವಾರು ವಾರ್ಡ್ ಗಳು ಸಿಸಿ ರಸ್ತೆ ಭಾಗ್ಯ ಕಂಡಿವೆ, ಅಲ್ಲದೆ ವೇಗವಾಗಿ ಬೆಳೆಯುತ್ತಿರುವ ಶಿರಾ ನಗರಕ್ಕೆ ಕಣ್ಗಾವಲಾಗಿ ಸಿಸಿ ಕ್ಯಾಮೆರಾ ಬೇಕು ಎಂಬ ಪೊಲೀಸ್ ಇಲಾಖೆಯ ಮನವಿಗೆ ಸ್ಪಂದಿಸಿ ನಗರದ ಹಲವಾರು ಕಡೆ ಸಿ ಸಿ ಕ್ಯಾಮೆರಾ ಗಳನ್ನು ಅಳವಡಿಸಿದ್ದೇವೆ. ಇದು ನಾಗರೀಕರ ಹಿತ ರಕ್ಷಣೆಗೆ ಅನುಕೂಲವಾಗಲಿವೆ. ನಗರದಲ್ಲಿ ಹಲವಾರು ದಶಕಗಳಿಂದ ವಾಸ ಮಾಡುತ್ತಾ ಮನೆ ದಾಖಲೆಗಳನ್ನು ಹೊಂದಿಲ್ಲದ ಹಲವಾರು ಬಡ ಕುಟುಂಬಗಳನ್ನು ಗುರುತಿಸಿ, ಅವರ ಮನೆ ಖಾತೆ ಗಳನ್ನು ಸಕ್ರಮಗೊಳಿಸಿ ಈ ಸ್ವತ್ತಿನ ದಾಖಲೆ ಮಾಡಿದ್ದೇವೆ. ನಾನು ನಗರ ಸಭೆ ಅಧ್ಯಕ್ಷನಾದ ಮೇಲೆ ಕೈಗೊಂಡಿರುವ ಸಾಮಾಜಿಕ ಕಳಕಳಿ ಕಾರ್ಯಗಳು ಹಾಗೂ ಅಭಿವೃದ್ಧಿ ಕಾರ್ಯಗಳು ನನಗೆ ಹೆಚ್ಚು ತೃಪ್ತಿ ನೀಡುತ್ತವೆ. ಜನರ ಆಶೀರ್ವಾದ, ಪ್ರೀತಿಯೇ ನನಗೆ ಶ್ರೀರಕ್ಷೆ ಎಂದರು

ನಿರ್ಮಿತಿ ಕೇಂದ್ರದ ಅಭಿಯಂತರ ಪುಟ್ಟಲಿಂಗಪ್ಪ ಉಪಸ್ಥಿತರಿದ್ದರು

## ಆಯುರಾರೋಗ್ಯಕ್ಕಾಗಿ ಈಡುಗಾಯಿ ಸೇವೆ



ತಿಪಟೂರು : ರಾಜ್ಯ ಸರ್ಕಾರದ ಮಾಜಿ ಶಾಲಾ ಶಿಕ್ಷಣ ಸಚಿವರು ಹಾಗೂ ಮಾಜಿ ಶಾಸಕ ಬಿ.ಸಿ. ನಾಗೇಶ್ ರವರ 68ನೇ ಹುಟ್ಟುಹಬ್ಬದಂದು ತಿಪಟೂರು ಗ್ರಾಮದೇವತೆ ಕೆಂಪಮ್ಮ ದೇವಸ್ಥಾನದಲ್ಲಿ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿ 101 ತೆಂಗಿನಕಾಯಿಯನ್ನು ಈಡಗಾಯಿ ಒಡೆಯುವ ಮೂಲಕ ಮಾಜಿ ಸಚಿವ ಬಿ.ಸಿ ನಾಗೇಶ್‌ರವರ ಆಯುರಾರೋಗ್ಯವನ್ನು ನೀಡಲಿ ಎಂದು ದೇವರಲ್ಲಿ ಪ್ರಾರ್ಥಿಸಿದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಕಂದಾಯ ದಿನಾಚರಣೆ : ಸಾಧಕ ಅಧಿಕಾರಿ ಹಾಗೂ ಸಿಬ್ಬಂದಿಗೆ ಪ್ರಶಸ್ತಿ ಪ್ರದಾನ

ತುಮಕೂರು: ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿ ಪ್ರಗತಿ ಸಾಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗವನ್ನು ನಗರದ ಕನ್ನಡ ಸಾಹಿತ್ಯ ಭವನದಲ್ಲಿ ಬುಧವಾರ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕರ್ನಾಟಕ ರಾಜ್ಯ ಕಂದಾಯ ಇಲಾಖಾ ನೌಕರರ ಸಂಘದ ಜಿಲ್ಲಾ ಶಾಖೆ, ಗ್ರಾಮ ಆಡಳಿತಾಧಿಕಾರಿಗಳ ಜಿಲ್ಲಾ ಸಂಘ ಹಾಗೂ ದ್ವಿತೀಯ ದರ್ಜೆ ಸಹಾಯಕರ ನೌಕರರ ಜಿಲ್ಲಾ ಸಂಘದ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಿದ್ದ ಕಂದಾಯ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಕಂದಾಯ ಇಲಾಖೆಯು ಜಿಲ್ಲೆಯ ಜನತೆಗೆ ತ್ವರಿತ, ಪಾರದರ್ಶಕ ಹಾಗೂ ಜನಸ್ನೇಹಿ ಸೇವೆಗಳನ್ನು ಒದಗಿಸುವ ಮೂಲಕ ಜಿಲ್ಲೆಯ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರವಹಿಸುತ್ತಿದೆ. ಜಿಲ್ಲೆಯ 1.56 ಲಕ್ಷಕ್ಕೂ ಅಧಿಕ ರೈತರಿಗೆ ಪೌತಿ ಖಾತೆ ಒದಗಿಸುವ



ಮೂಲಕ ಮಹತ್ವದ ಸಾಧನೆ ಮಾಡಲಾಗಿದ್ದು, ಈ ಅಭಿಯಾನವು ಗಿನ್ನೆಸ್ ವಿಶ್ವ ದಾಖಲೆ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವುದು ಜಿಲ್ಲೆಯ ಹೆಮ್ಮೆಯ ವಿಷಯವಾಗಿದೆ ಎಂದರು.

ಇದಲ್ಲದೆ, 16 ವರ್ಷಗಳಿಂದ ಬಾಕಿ ಉಳಿದಿದ್ದ 202 ಅಲೆಮಾರಿ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಿಸುವ ಮೂಲಕ ಅವರ ಬಹುಕಾಲದ ಕನಸನ್ನು ನನಸಾಗಿಸಲಾಗಿದೆ. ಈ ಮೂಲಕ ಹಲವು ಕುಟುಂಬಗಳಿಗೆ ಭೂಮಿಯ (ಪುಟ–2)

## ಕಂದಾಯ ದಿನಾಚರಣೆ : ಸಾಧಕ ಅಧಿಕಾರಿ

ಕಾನೂನುಬದ್ಧ ಹಕ್ಕು ದೊರೆತು, ಸಾಮಾಜಿಕ ಹಾಗೂ ಆರ್ಥಿಕ ಭದ್ರತೆ ಒದಗಿಸಲಾಗಿದೆ ಎಂದು ತಿಳಿಸಿದರು.

ಭೂ ದಾಖಲೆಗಳ ನಿರ್ವಹಣೆ, ಪೌತಿ ಖಾತೆ ಅಭಿಯಾನ, ಹಕ್ಕುಪತ್ರ ವಿತರಣೆ, ಪ್ರಕೃತಿ ವಿಕೋಪಗಳ ಸಂದರ್ಭದಲ್ಲಿ ತುರ್ತು ಸ್ಪಂದನೆ, ಸಾರ್ವಜನಿಕರ ಅರ್ಜಿಗಳ ತ್ವರಿತ ವಿಲೇವಾರಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಕಂದಾಯ ಇಲಾಖೆಯು ಜನಪರ ಸೇವೆ ಸಲ್ಲಿಸುತ್ತಿದ್ದು, ಸಾರ್ವಜನಿಕರ ವಿಶ್ವಾಸ ಗಳಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಜನಸ್ನೇಹಿ ಆಡಳಿತ, ಪಾರದರ್ಶಕತೆ ಹಾಗೂ ಸಮಯಬದ್ಧ ಸೇವೆ ನೀಡುವ ಬದ್ಧತೆಯನ್ನು ಪುನರುಚ್ಚರಿಸಿದರು. ಮುಂದಿನ ದಿನಗಳಲ್ಲಿಯೂ ಸಾರ್ವಜನಿಕರಿಗೆ ಇನ್ನಷ್ಟು ಗುಣಮಟ್ಟದ ಸೇವೆಗಳನ್ನು ಒದಗಿಸಲು ಸಮರ್ಪಣಾ ಮನೋಭಾವದಿಂದ ಕಾರ್ಯನಿರ್ವಹಿಸುವ ಸಂಕಲ್ಪ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಗ್ರಾಮ ಆಡಳಿತಾಧಿಕಾರಿಗಳು, ವಿವಿಧ ಸಂಘಗಳ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

ಕಂದಾಯ ಇಲಾಖೆಯ ಸಾಧನೆಗೆ ಸೇವೆ ಸಲ್ಲಿಸಿದ ನೌಕರರ ಅಮೂಲ್ಯ ಕೊಡುಗೆಯನ್ನು ಈ ಸಂದರ್ಭದಲ್ಲಿ ಸ್ಮರಿಸಲಾಯಿತು.



ಸಿರಾ ತಾಲೂಕು ದ್ವಾರನಕುಂಟೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆಯ ಕಾರ್ಯಕ್ರಮವನ್ನು ಡಾ.ನರೇಂದ್ರಬಾಬು, ಹಿರಿಯ ದಂತ ವೈದ್ಯರಾದ ಡಾಕ್ಟರ್ ಮಂಜುನಾಥ್,ಡಾ. ಸಿದ್ದೇಶ್, ಡಾ. ಶ್ರೀಕಾಂತ್, ಡಾ. ತಿಮ್ಮರಾಜು, ಸಾಹಿತಿ ಡಾ.ದ್ವಾರನಕುಂಟೆ ಲಕ್ಷ್ಮಣ್,ತಿಮ್ಮರಾಜು

ಆರೋಗ್ಯ ಸಿಬ್ಬಂದಿಗಳಾದ ನಿರಂಜನ್, ಮೂರ್ತಿ, ಕವಿತಾ, ಸವಿತಾ, ರೋಜಾ, ವಿಜಯಲಕ್ಷ್ಮಿ, ಪರಿಟ, ಆಶಾ ಕಾರ್ಯಕರ್ತೆಯರು, ಶಾಲಾ ಶಿಕ್ಷಕರು ಹಾಗೂ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು

ಅಬಕಾರಿ ಇಲಾಖೆ: ವಶಗೊಂಡಿದ್ದ ವಾಹನಗಳ ಸದ್ ಇಲ್ಲದೆ

## ಹರಾಜು ಪ್ರಕ್ರಿಯೆ ನೆಡೆಸಿದ : ಮೈಕಲ್ ಜಾರ್ಜ್



ಪಾವಗಡ :ಪಟ್ಟಣದ ಅಬಕಾರಿ ಕಚೇರಿಯಲ್ಲಿ ಪ್ರಕರಣಗಳಲ್ಲಿ ವಶಪಡಿಸಿಕೊಂಡ ವಾಹನಗಳ ಹರಾಜು ಪ್ರಕ್ರಿಯೆ ಸೋಮವಾರ ಕಾನೂನು ಬಹಿರವಾಗಿ ಜರುಗಿತು ಎಂದು ತಾಲ್ಲೂಕಿನ ಸಾರ್ವಜನಿಕರು ಆರೋಪಿಸಿದರು.

ಪಟ್ಟಣದ ವಲಯ ಕಚೇರಿ ಆವರಣದಲ್ಲಿ ಮಧುಗಿರಿ ಅಬಕಾರಿ ಉಪ ಅಧೀಕ್ಷಕ ದೀಪಕ್ ಅವರ ನೇತೃತ್ವದಲ್ಲಿ ನಡೆದ ಹರಾಜು ಪ್ರಕ್ರಿಯೆಯಲ್ಲಿ ಒಟ್ಟು 7 ದ್ವಿ ಚಕ್ರ ವಾಹನಗಳು ಹರಾಜಾದವು ಈ ಹರಾಜುನಲ್ಲಿ ಪಾವಗಡ ತಾಲ್ಲೂಕಿನ ಸಾರ್ವಜನಿಕರಿಗಾಗಲಿ ಯಾವುದೇ ನೋಟಿಸ್ ಬೋರ್ಡ್ ಆಗಲಿ ಪತ್ರಿಕಾ ಹರಾಜು ಆಗಲಿ ಅಥವಾ ಬಹಿರಂಗ ಹರಾಜು ತಿಳಿಸದೇ ಸರ್ಕಾರದ ನಿಯಮ ಪಾಲನೆ ಮಾಡದೆ ತಮ್ಮ ಇಷ್ಟ ಅನುಸಾರ ತಮ್ಮಗೆ ಬೇಕಾದವರಿಗೆ ಮಾತ್ರ ಮಾಹಿತಿ ನೀಡಿ ಕರಿಸಿಕೊಂಡು ವಾಹನ ಹರಾಜು ಮಾಡಲಾಗಿದೆ ಎಂದು ತಿಳಿದು ಬಂದಿದೆ.

ಪಕ್ಕದ ಶಿರಾ ಮತ್ತು ಆಂಧ್ರ ಕಲ್ಯಾಣದುರ್ಗ ಮಾಡಕಶಿರಾ ತಾಲೂಕಿನವರು ಬಂದು ಅಬಕಾರಿ ಇಲಾಖೆಯಲ್ಲಿ ದ್ವಿಚಕ್ರ ವಾಹನ ಹರಾಜು ಮಾಡುತ್ತಾರೆ ಸಾರ್ವಜನಿಕರು ಆರೋಪಿಸಿದರು.

ಸ್ಥಳೀಯರಿಗೆ ಮಾಹಿತಿ ಇಲ್ಲದೆ ಇದು ಯಾವ ನಿಯಮ ಎಂದು ತಾಲ್ಲೂಕಿನ ಜನರು ಅಬಕಾರಿ ಇನ್ಸೆಕ್ಟರ್ ಮೈಕಲ್ ಜಾರ್ಜ್ ಈ ನಡೆಗೆ ತೀವ್ರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಏಳು ವಾಹನಗಳ ಹರಾಜು ಪ್ರಕ್ರಿಯೆ ಮಾಹಿತಿ ನೀಡದೆ ನಿರಾಕರಣೆ ಮಾಹಿತಿ ಕೇಳಲು ಹೋದವರ ಮೇಲೆ ಹಣದ ಬೇಡಿಕೆ ಇಡುತ್ತಿದ್ದಾರೆಂದು ಒಕ್ಕಲಿಬ್ಬಿಸುವ ಕೆಲಸ ಮಾಡುತ್ತಿದ್ದಾರೆ ಇನ್ಸೆಕ್ಟರ್ ಜಾರ್ಜ್ ಮಾಡುತ್ತಾರೆ ಎಂದು ಹೇಳುತ್ತಾರೆ.

ಈ ಪ್ರಕ್ರಿಯೆಯಲ್ಲಿ ತಾಲ್ಲೂಕು ಅಬಕಾರಿ ಇನ್ಸೆಕ್ಟರ್ ಮೈಕಲ್ ಜಾರ್ಜ್ ಸಿಬ್ಬಂದಿವರ್ಗ ಹಾಜರಿದ್ದರು.


# ಕರ್ನಾಟಕ ಸರ್ಕಾರ
# ತೋಟಗಾರಿಕೆ ಇಲಾಖೆ

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ,–572130

ಸಂಹಿಸತೋನಿ/ಜಿಪಂ/ಕು/ವಿನಿ/10/2026–272.///22/10/2026–27

# ಟೆಂಡರ್ ಪ್ರಕಟಣೆ

2026–27 ನೇ ಸಾಲಿನಲ್ಲಿ ಈ ಕಛೇರಿಗೆ ಅಗತ್ಯವಿರುವ ಕಾರು (ಮಹೀಂದ್ರ ಬುಲೆರೋ/ಸುಜುಕಿ/ಸ್ವಿಫ್ಟ್/ಟಿಯೋಟ/ಹುಂಡೈ) 2021 ನಂತರದ ಉತ್ತಮ ಸುಸ್ಥಿತಿಯಲ್ಲಿರುವ ಒಂದು ವಾಹನವನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಸಲ್ಲಿಸಲು ಟೆಂಡರ್ ಅರ್ಜಿ ಶುಲ್ಕ ರೂ 500/– ಅನ್ನು ಪಾವತಿಸಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಜಿ.ಪಂ), ಕುಣಿಗಲ್, ಕಛೇರಿಯಲ್ಲಿ ಅರ್ಜಿಯನ್ನು ಕಛೇರಿ ವೇಳೆಯಲ್ಲಿ ಪಡೆಯಬಹುದು. ಟೆಂಡರ್ ಪ್ರಾರಂಭ ದಿನಾಂಕ: 30–06–2026 ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ: 14–07–2026 ಸಂಜೆ 4.00 ಗಂಟೆ ಹೆಚ್ಚಿನ ಮಾಹಿತಿಗಾಗಿ ಕೆಳ ಸಹಿದಾರರನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದು.

ಸಹಿ

ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು,
(ಜಿ.ಪಂ), ಕುಣಿಗಲ್.


# ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ರಾಷ್ಟ್ರೀಯ ವೈದ್ಯರ ದಿನಾಚರಣೆ

# ವೈದ್ಯಕೀಯ ಸಂಶೋಧನೆಗೆ ಆದ್ಯತೆ : ಡಾ.ಎಂ.ಆರ್.ಹುಲಿನಾಯ್ಕರ್

ತುಮಕೂರು: ವೈದ್ಯರ ಅನುಭವ ಸಂಶೋಧನೆಗೆ ಸದ್ಬಳಕೆಯಾಗಬೇಕು ಎಂದು ಶ್ರೀದೇವಿ ಸಮೂಹ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಡಾ.ಎಂ.ಆರ್.ಹುಲಿನಾಯ್ಕರ್‌ರವರು ಅಭಿಪ್ರಾಯಪಟ್ಟಿದ್ದಾರೆ.

ಶ್ರೀದೇವಿ ವೈದ್ಯಕೀಯ ಕಾಲೇಜಿನಲ್ಲಿ ಏರ್ಪಡಿಸಿದ ಜುಲೈ 1 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ "ರಾಷ್ಟ್ರೀಯ ವೈದ್ಯರ ದಿನಾಚರಣೆ" ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ನಮ್ಮ ದೇಶದಲ್ಲಿ ವೈದ್ಯಕೀಯ ವಿಜ್ಞಾನ ಅಗಾಧವಾಗಿ ಬೆಳೆದಿದೆ ಅದು ಪುಸ್ತಕ ರೂಪದಲ್ಲಿ ಹೊರಗೆ ಬರಬೇಕು ಅದರ ಪ್ರಯೋಜನ ಸಮಾಜಕ್ಕೆ ವೈದ್ಯಕೀಯ ಲೋಕಕ್ಕೆ ಸದುಪಯೋಗವಾಗಬೇಕಾದರೆ ಆಸ್ಪತ್ರೆಗಳಲ್ಲಿ ಮತ್ತು ಚಿಕಿತ್ಸಾಲಯಗಳಲ್ಲಿ ವೈದ್ಯರಿಗೆ ದೊರೆಯುವ ಅನುಭವ ಮತ್ತು ಜ್ಞಾನವನ್ನು ಸಂಶೋಧನೆಗೆ ಬಳಸಬೇಕಾಗಿದೆ. ಈ ನಿಟ್ಟಿನಲ್ಲಿ ಶೇ.90% ಕೆಲಸ ಆಗಬೇಕಾಗಿದೆ. "ಹಿತ್ತಲಗಿಡ–ಮದ್ದಲ್ಲ"ಎಂಬ ಗಾದೆ ಮಾತಿನಂತೆ ಬೇರೆ ದೇಶದವರು ಹೇಳುವುದಕ್ಕೆ ಮಾನ್ಯತೆ ಕೊಡುವುದಕ್ಕಿಂತ ನಮ್ಮ ದೇಶದ ವೈದ್ಯಕೀಯ ಜ್ಞಾನವನ್ನು ಸಂಶೋಧನೆ ಮೂಲಕ ಬಳಸಿಕೊಳ್ಳಬೇಕು ಎಂದು ಒತ್ತಿ ಹೇಳಿದರು. ಮನುಷ್ಯನಿಗೆ ನೀರು, ಗಾಳಿ ಶುದ್ಧವಾಗಿರಬೇಕು




ಎಂಬುದನ್ನು ಡಾ.ಬಿ.ಸಿ.ರಾಯ್ ವೃತ್ತಿ ಜೀವನದಲ್ಲಿ ಪ್ರತಿಪಾದನೆ ಮಾಡಿಕೊಂಡು ಬರುತ್ತಿದ್ದರು. ಆಧುನಿಕ ಬಂಗಾಳದ ರೂವಾರಿಯಾಗಿದ್ದರು. ಮುಖ್ಯಮಂತ್ರಿಯಾಗಿದ್ದರು, ಬಿಡುವಿಲ್ಲದ ಕೆಲಸ ಕಾರ್ಯಗಳ ನಡುವೆಯೂ ಪ್ರತಿದಿನ ಒಂದು ಗಂಟೆ ವೈದ್ಯಕೀಯ ಸೇವೆಯಲ್ಲಿ ತೊಡಗುತ್ತಿದ್ದರು. ರಾಷ್ಟ್ರಪಿತ ಮಹಾತ್ಮ ಗಾಂಧಿ ಪರ್ಸನಲ್ ಡಾಕ್ಟರ್‌ಯಾಗಿ ಮತ್ತು ಅನೇಕ ರಾಜಕಾರಣಿಗೆ ಹತ್ತಿರದ ವೈದ್ಯರಾಗಿ ಪ್ರತಿದಿನ ಮಾರ್ಗದರ್ಶನ ಮಾಡುತ್ತಿದ್ದರು. ಅವರ ಮೌಲ್ಯ–ಅದರ್ಶಗಳನ್ನು ವೈದ್ಯರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಬದುಕಿನಲ್ಲಿ ಅಳವಡಿಸಿಕೊಂಡರೆ ವೈದ್ಯರ ದಿನಾಚರಣೆಗೆ ಹೆಚ್ಚಿನ ಮಹತ್ವ ಬರುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಗೌರವ ಅತಿಥಿಯಾದ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ನಿರ್ದೇಶಕ ಹಾಗೂ ಟ್ರಸ್ಟಿಯಾದ ಡಾ. ರಮಣ್ ಎಂ. ಹುಲಿನಾಯ್ಕರ್‌ರವರು ಮಾತನಾಡಿ ವೈದ್ಯ ವೃತ್ತಿಯು ದೇವರು ನೀಡಿರುವ ಅತ್ಯಂತ ಶ್ರೇಷ್ಠ ಸೇವಾ ಅವಕಾಶವಾಗಿದೆ. ಪ್ರಾಮಾಣಿಕತೆ, ನಿಷ್ಠೆ ಹಾಗೂ ಮಾನವೀಯ ಮೌಲ್ಯಗಳೊಂದಿಗೆ ಪ್ರತಿಯೊಬ್ಬ ರೋಗಿಯನ್ನು ತಮ್ಮ ಕುಟುಂಬದ ಸದಸ್ಯರಂತೆ ಪರಿಗಣಿಸಿ ಚಿಕಿತ್ಸೆ ನೀಡಬೇಕು. ಡಾ.ಬಿ.ಸಿ.ರಾಯ್ ಅವರ ಮೌಲ್ಯಗಳನ್ನು ಅಳವಡಿಸಿಕೊಳ್ಳುವ ಮೂಲಕ ಉತ್ತಮ ವೈದ್ಯರಾಗಬಹುದು. ರೋಗಿಯ ಮುಖದಲ್ಲಿ ನಗು ಮತ್ತು ರೋಗಿಯ ಪ್ರಾಣ ಉಳಿಸುವ ಮೂಲಕವೇ ನಿಮ್ಮ ಸಂತೋಷವನ್ನು ಕಂಡುಕೊಳ್ಳಬೇಕು. ವೈದ್ಯಕೀಯ ಕ್ಷೇತ್ರದ ಆದರ್ಶ ವ್ಯಕ್ತಿಯಾಗಿರುವ ಡಾ. ಬಿ.ಸಿ. ರಾಯ್ ಅವರ ತತ್ವ, ಆದರ್ಶ ಮತ್ತು ಸೇವಾ ಮನೋಭಾವವನ್ನು ಪ್ರತಿಯೊಬ್ಬ ವೈದ್ಯರೂ ಅನುಸರಿಸಿ, ನಕಾರಾತ್ಮಕ ವಿಚಾರಗಳನ್ನು ಕಡೆಗಣಿಸಿ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಾನವ ಸಂಪನ್ಮೂಲ ವಿಭಾಗದ ನಿರ್ದೇಶಕರಾದ ಎಂ.ಎಸ್.ಪಾಟೀಲ್ ಮಾತನಾಡುತ್ತಾ, ಭಾರತದೆಲ್ಲೆಡೆ ಬಿ.ಸಿ. ರಾಯ್ ಅವರ ಜನ್ಮದಿನವನ್ನು ರಾಷ್ಟ್ರೀಯ ವೈದ್ಯರ ದಿನವನ್ನಾಗಿ ಆಚರಿಸಲಾಗುತ್ತಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಉನ್ನತ ವೃತ್ತಿಪರ ಕೌಶಲ್ಯ, ನೈತಿಕ ಬದ್ಧತೆ ಮತ್ತು ಸಮಾಜಸೇವೆಯ ಪ್ರತೀಕವಾಗಿರುವ ಬಿ.ಸಿ. ರಾಯ್ ಅವರ ಆದರ್ಶಗಳು ಪ್ರತಿಯೊಬ್ಬ ವೈದ್ಯರಿಗೂ ಪ್ರೇರಣೆಯಾಗಿದೆ. ಡಾ.ಬಿ.ಸಿ.ರಾಯ್ ಪ್ರಶಸ್ತಿಗೆ ಭಾಜನರಾದ ಇಬ್ಬರು ವೈದ್ಯರ ಆಸ್ಪತ್ರೆಯ ಕೀರ್ತಿ, ಗೌರವ ಹೆಚ್ಚಿಸಿದ್ದಾರೆ. ವೈದ್ಯಕೀಯ ಕ್ಷೇತ್ರದಲ್ಲಿ ಇನ್ನೂ ಹೆಚ್ಚಿನ ಸಾಧನೆ ಮಾಡಲಿ ಎಂದು ಆರ್ಶಿಸಿದರು.

ಶ್ರೀದೇವಿ ಡಾ.ಬಿ.ಸಿ.ರಾಯ್ ಪ್ರಶಸ್ತಿ–2026: ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯ ಅಂಗರಚನಾಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ಶಿವಲೀಲಾ.ಸಿ.ರವರು ಶೈಕ್ಷಣಿಕ ಶ್ರೇಷ್ಠತೆ ಪ್ರಶಸ್ತಿ ಪುರಸ್ಕೃತರಿಗೆ ಡಾ.ಬಿ.ಸಿ.ರಾಯ್ ಪ್ರಶಸ್ತಿ ಹಾಗೂ ನಿವೃತ್ತ ಲೆಫ್ಟಿನೆಂಟ್ ಕಾಮೆಂಡರ್ ಭಾರತೀಯ ನೌಕಾಪಡೆ ಪ್ಲಾಸ್ಟಿಕ್ ಸರ್ಜರಿ ಮತ್ತು ಪುನರ್ನಿರ್ಮಾಣ ಶಸ್ತ್ರಚಿಕಿತ್ಸಕರಾದ ಡಾ.ವಿನೋದ ಕುಮಾರ್.ಎ.ರವರಿಗೆ 2026ನೇ ಸಾಲಿನ ಶ್ರೀದೇವಿ ಡಾ.ಬಿ.ಸಿ.ರಾಯ್ ಪ್ರಶಸ್ತಿ ಪುರಸ್ಕೃತರಿಗೆ ಕ್ಲಿನಿಕಲ್ ಎಕ್ಸ್‌ಲೆನ್ಸ್ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿತ್ತು. ಇಬ್ಬರು ವೈದ್ಯರು ತಮ್ಮ ಅನುಭವವನ್ನು ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಟ್ರಸ್ಟಿ ಹಾಗೂ ನೇತ್ರತಜ್ಞೆ ಡಾ.ಲಾವಣ್ಯ, ಶ್ರೀದೇವಿ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ.ಎಂ.ಎಲ್.ಹರೇಂದ್ರಕುಮಾರ್, ಶ್ರೀದೇವಿ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ಕೆ.ಮೋಹನ್‌ಕುಮಾರ್, ನ್ಯಾಯವಿಧಿ ವಿಜ್ಞಾನಶಾಸ್ತ್ರ ವಿಭಾಗದ ಮುಖ್ಯಸ್ಥರು ಹಾಗೂ ಆಡಳಿತ ವಿಭಾಗದ ಉಪಪ್ರಾಂಶುಪಾಲ ಡಾ.ಹೇಮಂತ್ ರಾಜ್.ಎಂ.ಎನ್, ಉಪಪ್ರಾಂಶುಪಾಲ ಡಾ.ರೇಖಾಗುರುಮೂರ್ತಿ ಹಾಗೂ ವಿವಿಧ ವಿಭಾಗದ ಮುಖ್ಯಸ್ಥರು ಸಿಬ್ಬಂದಿ ವರ್ಗ, ವಿದ್ಯಾರ್ಥಿ– ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡಬಾರದು:ಪರಂ

ಬೆಳಗಾವಿ: ಉಪ ಮುಖ್ಯಮಂತ್ರಿಗಳು, ಕಂದಾಯ ಮತ್ತು ಕ್ರೀಡಾ ಸಚಿವರಾದ ಡಾ.ಜಿ.ಪರಮೇಶ್ವರ ಅವರು ಬೆಳಗಾವಿ ಸುವರ್ಣಸೌಧದ ಸೆಂಟ್ರಲ್ ಹಾಲ್‌ನಲ್ಲಿ ಬೆಳಗಾವಿ ವಿಭಾಗದ ಹವಾಮಾನ ಪರಿಸ್ಥಿತಿ ಮತ್ತು ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ, ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.

ರಾಜ್ಯದಲ್ಲಿ SIR ಪ್ರಕ್ರಿಯೆ ನಡೆಯುತ್ತಿದೆ ಅನೇಕರಿಗೆ ಖಾಯಂ ನಿವಾಸಿ ದೃಢಿಕರಣಪತ್ರ (ಪಿಆರ್‌ಸಿ) ದ ಅಗತ್ಯ ಇದೆ. PRC ಯನ್ನು ತಹಸೀಲ್ದಾರ್ ಮತ್ತು ಮೇಲ್ಪಟ್ಟ ಅಧಿಕಾರಿಗಳು ನೀಡಬೇಕು. ಯಾವ ಅರ್ಹ ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡಬಾರದು. ಅಗತ್ಯ ಇರುವವರಿಗೆ ತುರ್ತಾಗಿ ಕಖಅ ನೀಡಬೇಕು. ಅದಕ್ಕೆ ಅಗತ್ಯ ಇರುವ ಕ್ರಮಗಳನ್ನು ಕೈಗೆತ್ತಿಕೊಳ್ಳಬೇಕು.

ಇಡೀ ದೇಶದಲ್ಲಿ ಬರದ ಛಾಯೆಯಿದೆ. ದೇಶವು 1901 ರ ನಂತರ ಅತ್ಯಂತ ಕಡಿಮೆ ಮಳೆ ಕಂಡಿದೆ. ಕರ್ನಾಟಕವು 2023 ಕ್ಕಿಂತ ತುಸು ಉತ್ತಮ ಮಳೆ ಕಂಡಿದೆ. ಆದರೆ ಜುಲೈ ತಿಂಗಳಲ್ಲೂ ಅತ್ಯಂತ ಕಡಿಮೆ ಬೀಳಬಹುದು ಎಂದು ಭಾರತೀಯ ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದೆ. ನಮ್ಮ ಜಲಾಶಯಗಳಲ್ಲಿ ನೀರು ಡೆಡ್ ಸ್ಟೋರೇಜ್ ಮಟ್ಟ ಮುಟ್ಟಿದೆ. ಇರುವ ನೀರನ್ನು ಅತ್ಯಂತ ಎಚ್ಚರಿಕೆಯಿಂದ ಬಳಸಬೇಕು ಎಂದು ನಿರ್ದೇಶನ ನೀಡಿದರು.

ಕುಡಿಯುವ ನೀರಿಗೆ ಆದ್ಯತೆ ನೀಡಬೇಕು. ಲಭ್ಯವಿರುವ ನೀರನ್ನು ಕುಡಿಯಲು ಹೊರತುಪಡಿಸಿ, ಬೇರೆ ಯಾವುದೇ ರೀತಿಯ ಉದ್ದೇಶಕ್ಕೆ ಬಳಕೆ ಆಗಬಾರದು. ಕೆನಾಲ್‌ಗಳಿಗೆ, ನದಿಗಳಿಗೆ ಅನಧಿಕೃತ ಪಂಪ್‌ಸೆಟ್‌ಗಳನ್ನು ಅಳವಡಿಸುವವರ ವಿರುದ್ಧ ಸೂಕ್ತ ಕ್ರಮ ಜರುಗಿಸಿ, ತೆರವುಗೊಳಿಸಲು ತಿಳಿಸಿದರು.

ಬೆಳಗಾವಿ ವಿಭಾಗದ ಯಾವುದೇ ಹಳ್ಳಿ ಮತ್ತು ನಗರ ಪ್ರದೇಶಗಳಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರಿಗೆ ಸಮಸ್ಯೆ ಉಂಟಾಗಬಾರದು. ಕುಡಿಯುವ ನೀರು ಪೂರೈಕೆ ವಿಚಾರದಲ್ಲಿ ಸರ್ಕಾರಕ್ಕೆ ಮುಜುಗರ ತರುವ ಕೆಲಸ ಆಗಕೂಡದು. ಈ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸಬಾರದು. ಎಲ್ಲ ಇಲಾಖೆಯ ಅಧಿಕಾರಿಗಳು ಸಮನ್ವಯತೆಯಿಂದ ಒಟ್ಟಾಗಿ ಕೆಲಸ ಮಾಡಬೇಕು ಎಂದು ಎಚ್ಚರಿಕೆ ನೀಡಿದರು.

ನೀರಿನ ಕೊರತೆ ಉಂಟಾಗುವ ಹಿನ್ನೆಲೆಯಲ್ಲಿ ಜನರು ಮುಂಜಾಗ್ರತೆಯಿಂದ ನೀರನ್ನು ಹೆಚ್ಚಾಗಿ ಶೇಖರಿಸುತ್ತಾರೆ. ಇದರಿಂದ ಡೆಂಗ್ಯೂ ಸೇರಿದಂತೆ ಇನ್ನಿತರೆ ಸಾಂಕ್ರಾಮಿಕ ಕಾಯಿಲೆಗಳು ಹರಡುವ ಸಾಧ್ಯತೆ ಇರುತ್ತದೆ. ಎಲ್ಲ ಡಿಸಿ, ಸಿಇಒಗಳು




ಈ ಬಗ್ಗೆ ಮುನ್ನೆಚ್ಚರಿಕೆ ವಹಿಸಲು ಡಿಹೆಚ್‌ಒಗಳಿಗೆ ಅಗತ್ಯ ಸೂಚನೆಗಳನ್ನು ನೀಡುವಂತೆ ಆದೇಶಿಸಿದರು.

ಈಗಾಗಲೇ ಬೆಳಗಾವಿ 34, ವಿಜಯಪುರ 24, ಬಾಗಲಕೋಟೆ 5, ಧಾರವಾಡ 27, ಗದಗ 25, ಹಾವೇರಿ 11 ಮತ್ತು ಉತ್ತರ ಕನ್ನಡ ಜಿಲ್ಲೆಯಲ್ಲಿ 10 ಡೆಂಗ್ಯೂ ಪ್ರಕರಣಗಳು ವರದಿಯಾಗಿವೆ. ಆರಂಭಿಕ ಹಂತದಲ್ಲೇ ಮುನ್ನೆಚ್ಚರಿಕೆ ವಹಿಸುವಂತೆ ಜನರಿಗೆ ಸೂಕ್ತ ತಿಳುವಳಿಕೆ ಮೂಡಿಸಿ, ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಒತ್ತಿ ಹೇಳಿದರು.

ಪಿಂಚಣಿ ನಿಲ್ಲಿಸಲಾಗಿದೆ ಎಂಬ ವದಂತಿ ಹಬ್ಬಿಸಲಾಗುತ್ತಿದೆ. ಇದನ್ನು ಬೇಗ ಇತ್ಯರ್ಥಪಡಿಸಬೇಕು. ಅರ್ಹ ಪಿಂಚಣಿದಾರರು ಒಬ್ಬರಿಗೂ ಪಿಂಚಣಿ ನಿಲ್ಲಬಾರದು ಎಂದು ನಿರ್ದೇಶನ ನೀಡಿದರು.

ಜನರು ದೇವಸ್ಥಾನಗಳಿಗೆ ಹೋಗುವುದು ಹೆಚ್ಚಾಗುತ್ತಿದೆ. ಅಲ್ಲಿ ನೀರಿನ ಸಮಸ್ಯೆ ಉಂಟಾಗುವ ಸಾಧ್ಯತೆ ಇದೆ. ಕಲುಷಿತ ನೀರು ಕುಡಿದು ಸಮಸ್ಯೆಗೆ ಸಿಲುಕಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಈ ಕುರಿತು ಜಿಲ್ಲಾ ಪಂಚಾಯತ್ ಸಿಇಒಗಳು ನಿಗಾವಹಿಸಿ, ಸಮಸ್ಯೆಗಳಾಗದಂತೆ ಎಚ್ಚರವಹಿಸಬೇಕು ಎಂದರು.

ಮಳೆ ಪ್ರಮಾಣ ಗುರುತಿಸಲು ಮಳೆ ಮಾಪನ ಕೇಂದ್ರಗಳು ಅತ್ಯಗತ್ಯ. ಮಳೆ ಮಾಪನಗಳನ್ನು ಕೂಡಲೇ ದುರಸ್ಥಿಗೊಳಿಸಬೇಕು. ಹೊಸದಾಗಿ ಖರೀದಿಸುವುದಾದರೆ ಕೂಡಲೇ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದರು.

ಎಲ್ ನಿನೋ ಪರಿಣಾಮದಿಂದ ಕೆಲವು ಪ್ರದೇಶಗಳಲ್ಲಿ ಏಕಾಏಕಿ ಮಳೆ ಬರುವುದು, ಭೂಕುಸಿತ, ಹಠಾತ್ ಪ್ರವಾಹಗಳು, ಸಿಡಿಲು ಬರುವ ಸಂಭವ ಹೆಚ್ಚಿರುತ್ತದೆ. ಇದರಿಂದ ಜನ ಸಂಕಷ್ಟಕ್ಕೆ ಸಿಲುಕಬಹುದು. ಹಾಗಾಗಿ ಹವಾಮಾನ ಸೂಚನೆಗಳನ್ನು ಆಧರಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಕೊಳವೆಬಾವಿ, ಕೆರೆ ನೀರು ಸೇರಿದಂತೆ ನೀರಿನ ಮೂಲ ಇರುವ ಜಾಗದಲ್ಲಿ ರೈತರು ಜಾನುವಾರುಗಳಿಗೆ ಮೇವು ಬೆಳೆಯಲು ಪ್ರೋತ್ಸಾಹ ನೀಡಿ, ಮೇವಿನ ಬೀಜಗಳನ್ನು ವಿತರಿಸಬೇಕು. ತಾಪಮಾನ ಹೆಚ್ಚಳದಿಂದ ಜಾನುವಾರುಗಳಿಗೆ ಸಾಂಕ್ರಾಮಿಕ ರೋಗಗಳು ಬರಬಹುದಾದ ಸಾಧ್ಯತೆಗಳಿದ್ದು, ಅಗತ್ಯ ಲಸಿಕೆಗಳು ಲಭ್ಯವಿರುವ ಕುರಿತು ಮತ್ತು ಕಾಲಕಾಲಕ್ಕೆ ನೀಡಲಾಗುತ್ತಿದೆಯೇ ಎಂಬುದನ್ನು ಪರಿಶೀಲನೆ ನಡೆಸಲು ನಿರ್ದೇಶಿಸಿದರು.

ಕುಡಿಯುವ ನೀರಿಗಾಗಿ ಕೊಳವೆ ಬಾವಿಗಳನ್ನು ಬಾಡಿಗೆಗೆ ಪಡೆಯಬೇಕು. ನಂತರವೂ ಸಮಸ್ಯೆಗಳಿದ್ದರೆ ಕೊಳವೆ ಬಾವಿಗಳ ಡೀಪನಿಂಗ್ ಮಾಡಿಸಬೇಕು. ಕೊಳವೆ ಬಾವಿಗಳನ್ನು ಕೊರೆಸುವುದು ಕೊನೆಯ ಆದ್ಯತೆಯಾಗಿರಲಿ. ಈ ನಡುವೆ ಅಗತ್ಯವಿರುವ ಕಡೆ ಟ್ಯಾಂಕರ್‌ನಿಂದ ನೀರು ಪೂರೈಕೆ ಮಾಡುವಂತೆ ಮಾಡಬೇಕು. ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪಂಚಾಯತ್ ಸಿಇಒಗಳು ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಪ್ರತಿದಿನ ನಿಗಾವಹಿಸಿ ವರದಿ ನೀಡಬೇಕು. ಯಾವುದೇ ಕಾರಣಕ್ಕೂ ಪರಿಸ್ಥಿತಿ ಕೈಮೀರಬಾರದ ಹಾಗೆ ಆರಂಭಿಕ ಹಂತದಲ್ಲೇ ಎಚ್ಚರಿಕೆ ವಹಿಸುವಂತೆ ಸ್ಪಷ್ಟ ನಿರ್ದೇಶನ ನೀಡಿದರು.

ಬೆಳೆ ವಿಮೆ ವಿಷಯವನ್ನು ಕೃಷಿ ಇಲಾಖೆಯವರು ಗಂಭೀರವಾಗಿ ಪರಿಗಣಿಸಬೇಕು. ವಿಮಾ ಕಂಪೆನಿಯವರು ಮಾನದಂಡಗಳನ್ನು ಇದ್ದಕ್ಕಿದ್ದಂತೆ ಬದಲಾಯಿಸಿ, ಜನರಿಗೆ ಮೋಸ ಮಾಡಬಹುದು. ಈ ಬಗ್ಗೆ ಎಚ್ಚರ ವಹಿಸಬೇಕು. ಟಾಸ್ಕ್ ಫೋರ್ಸ್ ಸಭೆಯನ್ನು ನಿರಂತರವಾಗಿ ಕೈಗೊಳ್ಳಬೇಕು. ಡಿಸಿ ಮತ್ತು ಜಿಲ್ಲಾ ಪಂಚಾಯತ್ ಸಿಇಒಗಳು ಒಟ್ಟಾಗಿ ಕೆಲಸ ಮಾಡಬೇಕು. ಯಾವುದೇ ರೀತಿಯ ಸವಾಲುಗಳು ಎದುರಾದರೂ ಪರಿಹಾರ ಕ್ರಮ ಕೈಗೊಳ್ಳುತ್ತಿರುವ ಬಗ್ಗೆ ಮೇಲಾಧಿಕಾರಿಗಳ ಗಮನಕ್ಕೆ ತಂದು, ಈ ಬಗ್ಗೆ ಸರ್ಕಾರಕ್ಕೆ ವರದಿ ನೀಡುವಂತೆ ತಿಳಿಸಿದರು.

ರಾಜ್ಯ ಮುಜರಾಯಿ ಇಲಾಖೆಗೆ ಒಳಪಡುವ ವರ್ಗದ ದೇವಸ್ಥಾನಗಳ ಈಗಿರುವ ಮೂಲಸೌಕರ್ಯವನ್ನು ಮತ್ತಷ್ಟು ಸುಧಾರಿಸಬೇಕಿದೆ. ಭಕ್ತಾದಿಗಳಿಗೆ ವಸತಿ, ಶೌಚಗೃಹ, ಪ್ರಸಾದ ವಿತರಣೆಯ ವ್ಯವಸ್ಥೆಯಲ್ಲಿ ಗುಣಮಟ್ಟ ಹೆಚ್ಚಿಸುವಂತೆ ಸಲಹೆ ನೀಡಿದರು.

ತಹಶೀಲ್ದಾರ್, ಎಸಿ ಹಂತದ ಅಧಿಕಾರಿಗಳು ದೇವಸ್ಥಾನಗಳಿಗೆ ನಿರಂತರವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ದೇವಸ್ಥಾನದ ಆಸ್ತಿಗಳು ಒತ್ತುವರಿಯಾಗುತ್ತಿವೆ. ಇದನ್ನು ನೋಡಿಕೊಂಡು ಸುಮ್ಮನೆ ಕೂರಬೇಕೆ? ದೇವರ ಆಸ್ತಿ ಕಾಪಾಡಲು ಗಂಭೀರವಾಗಿ ಪರಿಗಣಿಸಬೇಕು. ಈ ವಿಚಾರದಲ್ಲಿ ನನಗೆ ಸಮಾಧಾನ ಇಲ್ಲ. ಪೊಲೀಸರ ನೆರವು ಪಡೆದು ಒತ್ತುವರಿಯಾಗಿರುವ ದೇವಸ್ಥಾನಗಳ ಆಸ್ತಿಯನ್ನು ಕೂಡಲೇ ತೆರವುಗೊಳಿಸುವಂತೆ ನಿರ್ದೇಶನ ನೀಡಿದರು.

ಒಂದು ತಿಂಗಳೊಳಗೆ ವರ್ಗದ ದೇವಸ್ಥಾನಗಳ ಮಾಸ್ಟರ್ ಪ್ಲಾನ್ ರೂಪಿಸಬೇಕು. ಆಯಾ ದೇವಸ್ಥಾನದ ಹಣವನ್ನು ದೇವಸ್ಥಾನಕ್ಕೆ ಖರ್ಚು ಮಾಡಲು ಕಾನೂನಿನಲ್ಲಿ ಅವಕಾಶ ಕಲ್ಪಿಸಲಾಗಿದೆ. ದೇವಸ್ಥಾನದ ಅಭಿವೃದ್ಧಿ ಚಟುವಟಿಕೆಗಳಿಗಾಗಿ ಸರ್ಕಾರದ ಅನುಮತಿ ಪಡೆದು ಜಮೀನು, ನಿವೇಶನ ಖರೀದಿಸಲು ಹಣ ಖರ್ಚು ಮಾಡುವಂತೆ ಆದೇಶಿಸಿದರು.

ದೇಶದ ದೊಡ್ಡದೊಡ್ಡ ದೇವಸ್ಥಾನಗಳಲ್ಲಿ ಕಾಣಿಕೆ ಹಣ ದುರುಪಯೋಗ ಆಗುತ್ತಿರುವ ಬಗ್ಗೆ ವರದಿಯಾಗುತ್ತಿದೆ. ಈ ಬಗ್ಗೆ ರಾಜ್ಯದಲ್ಲಿಯೂ ಎಚ್ಚರಿಕೆ ವಹಿಸಬೇಕಿದೆ. 6,686 ದೇವಸ್ಥಾನಗಳ ಸರ್ವೆ ಬಾಕಿ ಇದೆ. ಬೆಳಗಾವಿ ವಿಭಾಗದಲ್ಲಿ 5,571 ದೇವಸ್ಥಾನಗಳಿಗೆ ಖಾತೆ ಆಗಿಲ್ಲ. ಈ ಸಮಸ್ಯೆಯನ್ನು ಸಂಬಂಧಪಟ್ಟ ಅಧಿಕಾರಿಗಳು ಎರಡು ತಿಂಗಳೊಳಗೆ ಬಗೆಹರಿಸುವಂತೆ ತಿಳಿಸಿದರು.

ದೇವಸ್ಥಾನದ ಆಸ್ತಿ ಅನುಭವಿಸುತ್ತಾರೆ. ಅದನ್ನು ಮಾರಾಟ ಮಾಡಲಾಗುತ್ತಿದೆ. ನಕಲಿ ರೆಕಾರ್ಡ್ ಸೃಷ್ಟಿ ಮಾಡಿ ಮಾರಾಟ ಮಾಡುತ್ತಿದ್ದಾರೆ. ವಾರಕ್ಕೊಮ್ಮೆ ಪರಿಶೀಲಿಸಿ ತಡೆಯಬೇಕು. ಬೆಂಗಳೂರಲ್ಲಿ ನೂರಾರು ಆಸ್ತಿಗಳನ್ನು ಕೋಟ್ಯಂತರ ರೂಪಾಯಿಗೆ ಮಾರಾಟ ಮಾಡಲಾಗಿದೆ. ಇಂತಹ ದಂಧೆಯನ್ನು ಲಿಟಿಗೇಷನ್ ಮುಂದೆ ನೋಡಿಕೊಳ್ಳೋಣ ಎಂಬ ಮನಸ್ಥಿತಿಯಲ್ಲಿ ಮಾಡುತ್ತಾರೆ. ಮುಜರಾಯಿ ಇಲಾಖೆಯ ದೇವಸ್ಥಾನಗಳಿಗೆ ನಾನೇ ಭೇಟಿ ನೀಡುತ್ತೇನೆ. ನಾನು ಭೇಟಿ ನೀಡಿದಾಗ ವ್ಯವಸ್ಥೆ ಸರಿ ಇಲ್ಲದಿರುವುದು ಕಂಡು ಬಂದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಜಿಲ್ಲಾಧಿಕಾರಿಗಳು ಜಿಲ್ಲೆಯ ಚಿತ್ರಣವನ್ನು ಬದಲಾಯಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು. ಆ ಶಕ್ತಿ ನಿಮ್ಮಲ್ಲಿದೆ. ಜಿಲ್ಲೆಗಳಲ್ಲಿ ಕ್ರೀಡಾ ಸೌಕರ್ಯಗಳನ್ನು ಹೆಚ್ಚಿಸಬೇಕು. ಹಬ್ಬ, ಆಚರಣೆಗಳ ಸಂದರ್ಭದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಉತ್ತೇಜನ ನೀಡಬೇಕು ಎಂದು ಸೂಚಿಸಿದರು.

ಸಿಕ್ಕ ಅವಕಾಶದ ಸದುಪಯೋಗಪಡಿಸಿಕೊಂಡು ನಿಮ್ಮ ಅಧಿಕಾರದ ಸಂದರ್ಭದಲ್ಲಿ ಕೈಗೊಳ್ಳಲಾದ ಅಭಿವೃದ್ಧಿ ಚಟುವಟಿಕೆಗಳ ಆದ ಗುರುತು ಉಳಿಸಿಹೋಗಬೇಕು.

ಬರೀ ಕಂದಾಯ ಇಲಾಖೆಗೆ ಮಾತ್ರ ಸೀಮಿತವಾಗಿರಬಾರದು. ಶಾಲಾ–ಕಾಲೇಜುಗಳಿಗೆ ಹೋಗಿ ವಿವಿಧ ವಿಚಾರಗಳ ಕುರಿತು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಬೇಕು. ತಾವುಗಳು ಉನ್ನತ ಹುದ್ದೆಯಲ್ಲಿರುವುದರಿಂದ ವಿದ್ಯಾರ್ಥಿಗಳು ನಿಮ್ಮನ್ನು ಸ್ಫೂರ್ತಿಯಾಗಿ ತೆಗೆದುಕೊಳ್ಳುತ್ತಾರೆ. ಯುವಕರ ದೈನಂದಿನ ಚಟುವಟಿಕೆಯಲ್ಲಿ ದೊಡ್ಡ ಬದಲಾವಣೆ ಕಾಣತ್ತಾರೆ ಎಂದರು.

ಸಭೆಯಲ್ಲಿ ಕಂದಾಯ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ನವೀನ್ ರಾಜ್ ಸಿಂಗ್, ವಿಪತ್ತು ನಿರ್ವಹಣಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಾದ ಮನೋಜ್ ಕುಮಾರ್ ಮೀನಾ, ಪಶುಸಂಗೋಪನ ಇಲಾಖೆಯ ಕಾರ್ಯದರ್ಶಿಗಳಾದ ವಿನೋದ್ ಪ್ರಿಯ, ಕಂದಾಯ ಇಲಾಖೆಯ ಆಯುಕ್ತರಾದ ಮೀನಾ ನಾಗರಾಜ್, ಭೂಮಾಪನ ಮತ್ತು ಭೂ ದಾಖಲೆಗಳ ಆಯುಕ್ತರಾದ ವೆಂಕಟರಾಜಾ, ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರಾದ ಹೊನ್ನಾಂಬ, ಕಂದಾಯ ಇಲಾಖೆಯ ಬೆಳಗಾವಿ ವಿಭಾಗ ಪ್ರಾದೇಶಿಕ ಆಯುಕ್ತರಾದ ಜಾನಕಿ ಕೆ.ಎಂ., ಪಶುಸಂಗೋಪನಾ ಇಲಾಖೆಯ ಆಯುಕ್ತರಾದ ಶಿಲ್ಪಾ ನಾಗರಾಜ್ ಅವರು ಹಾಗೂ ಬೆಳಗಾವಿ ವಿಭಾಗದ ಎಲ್ಲ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಆರೋಗ್ಯಾಧಿಕಾರಿಗಳು ಉಪಸ್ಥಿತರಿದ್ದರು.


ಸೂರ್ಯ ಪ್ರಗತಿ
ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ
ಸಂಪರ್ಕಿಸಿ:


## ತುಮಕೂರು ವಿವಿಯಲ್ಲಿ 'ಭಾರತೀಯ ಸಂಸ್ಕೃತಿಗೆ ಜೈನ ಧರ್ಮದ ಕೊಡುಗೆ' ವಿಶೇಷ ಕಾರ್ಯಾಗಾರ

ತುಮಕೂರು: ತುಮಕೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಜೈನ ಅಧ್ಯಯನ ಡಿಪ್ಲೋಮಾ ವಿಭಾಗದ ವತಿಯಿಂದ ಭಾರತೀಯ ಸಂಸ್ಕೃತಿಗೆ ಜೈನ ಧರ್ಮದ ಕೊಡುಗೆ ಎಂಬ ವಿಷಯದ ಕುರಿತು ಎರಡು ದಿನಗಳ ವಿಶೇಷ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಈ ಪ್ರಮುಖ ಕಾರ್ಯಾಗಾರವು 2026ರ ಜುಲೈ 3 ಮತ್ತು 4 ರಂದು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿನಲ್ಲಿ ಬೆಳಿಗ್ಗೆ 10:00 ಗಂಟೆಯಿಂದ ಜರುಗಲಿದೆ.

ಜುಲೈ 3ರಂದು ಬೆಳಿಗ್ಗೆ ನಡೆಯುವ ಕಾರ್ಯಕ್ರಮವನ್ನು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಎಸ್. ಶ್ರೀನಿವಾಸ ಅವರು ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದಲ್ಲಿ ತುಮಕೂರು ವಿ.ವಿ.ಯ ಇತಿಹಾಸ ಮತ್ತು ಪುರಾತತ್ವ ವಿಭಾಗದ ಮುಖ್ಯಸ್ಥರಾದ ಡಾ. ಎಂ. ಕೊಟ್ರೇಶ್ ಹಾಗೂ ಸಂಪನ್ಮೂಲ ವ್ಯಕ್ತಿಗಳಾದ ಹೆಚ್.ಪಿ. ನಿತಿನ್ ಅವರು ಉಪಸ್ಥಿತರಿರಲಿದ್ದಾರೆ.

ಮೊದಲ ದಿನದ ಮೊದಲ ಉಪನ್ಯಾಸದಲ್ಲಿ 'ಭಾರತದಲ್ಲಿ ಜೈನ ಚಿತ್ರಕಲೆ – ವೈಶಿಷ್ಟ್ಯಗಳು' ಎಂಬ ವಿಷಯದ ಬಗ್ಗೆ ಹಾಗೂ ಎರಡನೇ ಉಪನ್ಯಾಸದಲ್ಲಿ 'ಭಾರತದಲ್ಲಿನ ಜೈನ ಗುಹೆಗಳ ವಿಶಿಷ್ಟತೆ' ಕುರಿತು ಚರ್ಚಿಸಲಾಗುತ್ತದೆ. 'ಜೈನ ಪ್ರತಿಮಾಶಾಸ್ತ್ರ ಮತ್ತು ವಿಶೇಷ ರಚನೆಗಳು' ಎಂಬ ವಿಷಯದ ಕುರಿತು ಮೂರನೇ ಉಪನ್ಯಾಸ ಹಾಗೂ ಸಂವಾದ ನಡೆಯಲಿದೆ.

ಜುಲೈ 4ರ ಎರಡನೇ ದಿನದಂದು ಬೆಳಿಗ್ಗೆ 10:30 ರಿಂದ 12:30 ರವರೆಗೆ 'ಜೈನ ದೇವಾಲಯ ವಾಸ್ತುಶಿಲ್ಪ ವಿಶಿಷ್ಟತೆಗಳ ಪರಿಚಯ' ಎಂಬ ವಿಷಯದ ಕುರಿತು ನಾಲ್ಕನೇ ಉಪನ್ಯಾಸ ಮತ್ತು ಸಂವಾದ ಕಾರ್ಯಕ್ರಮಗಳು ಜರುಗಲಿವೆ. ತದನಂತರ ಮಧ್ಯಾಹ್ನ 12:30 ರಿಂದ 1:30ರವರೆಗೆ ಸಮಾರೋಪ ಸಮಾರಂಭ ನಡೆಯಲಿದೆ ಎಂದು ಪ್ರಾಧ್ಯಾಪಕರಾದ ಡಾ. ಎಸ್.ಪಿ. ಪದ್ಮಪ್ರಸಾದ್ ಹಾಗೂ ಸಂಯೋಜಕರಾದ ಡಾ. ವೆಂಕಟರೆಡ್ಡಿ ರಾಮರೆಡ್ಡಿ ತಿಳಿಸಿದರು.


ಸೂರ್ಯ ಪ್ರಗತಿ
ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ
ಸಂಪರ್ಕಿಸಿ:
9901010109

# ಶಿಕ್ಷಕರ ಸಮಯ ಬದಲಾವಣೆ ಶೀಕ್ಷಕರ ಸಂಘದಿಂದ ಧನ್ಯವಾದ

## ಮೊಟ್ಟೆ, ಪೌಷ್ಟಿಕ ಆಹಾರದ ಮಾರುಕಟ್ಟೆ ದರ ಹೆಚ್ಚಳಕ್ಕೆ ಸರ್ಕಾರಕ್ಕೆ ಮನವಿ



ಹುಳಿಯಾರು: ಶನಿವಾರ ಬೆಳಿಗ್ಗೆ 7:30ಕ್ಕೆ ಎಲ್ಲಾ ಶಿಕ್ಷಕರು 'ಕಾಮ್ಸ್' ಹಾಜರಾತಿ ಮೂಲಕ ಶಾಲೆಗೆ ಹಾಜರಾಗಬೇಕೆಂಬ ಆದೇಶದ ಅನ್ವಯ, ಭೌಗೋಳಿಕ ಹಿನ್ನೆಲೆಯಲ್ಲಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ವೇಳಾಪಟ್ಟಿ ಬದಲಾವಣೆಯಾಗಿತ್ತು. ಆದರೆ ತುಮಕೂರು ಮತ್ತು ಮಧುಗಿರಿ ಜಿಲ್ಲೆಗಳಲ್ಲಿ ಯಾವುದೇ ಬದಲಾವಣೆ ಇರಲಿಲ್ಲ. ಈ ಕುರಿತು ಶಿಕ್ಷಕರು ನೀಡಿದ ಮನವಿಗೆ ತಕ್ಷಣ ಸ್ಪಂದಿಸಿ ಸಮಯ ಬದಲಾವಣೆ ಮಾಡಿದಕ್ಕಾಗಿ ತುಮಕೂರು ಜಿಲ್ಲೆಯ ಸಮಸ್ತ ಶಿಕ್ಷಕರ ಪರವಾಗಿ ಅಭಿನಂದನೆ ಸಲ್ಲಿಸಲಾಗಿದೆ ಎಂದು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತುಮಕೂರು ಜಿಲ್ಲೆಯ ನಿಕಟಪೂರ್ವ ಜಿಲ್ಲಾಧ್ಯಕ್ಷರಾದ ಆರ್.ಪರಶಿವಮೂರ್ತಿ ತಿಳಿಸಿದ್ದಾರೆ.

ಶಿಕ್ಷಕರ ಹಿತರಕ್ಷಣೆಗಾಗಿ ಆಯುಕ್ತರು ಮತ್ತು ಪ್ರಧಾನ ಕಾರ್ಯದರ್ಶಿಗಳಿಗೆ ಮನವಿ ಸಲ್ಲಿಸಿ ಸಮಯ ಬದಲಾವಣೆ ಮಾಡಿಸಿಕೊಟ್ಟ ರಾಜ್ಯ ಅಧ್ಯಕ್ಷರಾದ ಚಂದ್ರಶೇಖರ ನುಗ್ಗಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಚೇತನ್ ಹಾಗೂ ಮನವಿಗೆ ಸೂಕ್ತವಾಗಿ ಸ್ಪಂದಿಸಿ ಆದೇಶ ಹೊರಡಿಸಿದ ಆ೦ಯ೦ುಕ್ತರಾದ ವಿಕಾಸ್ ಕಿಶೋರ್ ಸ್೦ುರ್ ಳ್ಕರ್ ಮತ್ತು ಶಿಕ್ಷಣ ಇಲಾಖೆಯ ಪ್ರಧಾನ ಕಾ೦ರ್ಯದರ್ಶಿ ರಶ್ಮಿ ಮಹೇಶ್ ಅವರಿಗೆ ಜಿಲ್ಲೆಯ ಸಮಸ್ತ ಶಿಕ್ಷಕರ ಪರವಾಗಿ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

ಸರ್ಕಾರ ಶಾಲಾ ಮಕ್ಕಳಿಗೆ ವಾರದಲ್ಲಿ 6 ದಿನವೂ ಮೊಟ್ಟೆ ನೀಡಲು ಆದೇಶಿಸಿದೆ. ಆದರೆ, ಸರ್ಕಾರ ಒಂದು ಮೊಟ್ಟೆಗೆ ಬೇಯಿಸುವ ಗ್ಯಾಸ್ ವೆಚ್ಚ ಸೇರಿದಂತೆ ಕೇವಲ 6 ರೂ. ನೀಡುತ್ತಿದೆ. ಪ್ರಸ್ತುತ ಮಾರುಕಟ್ಟೆಯಲ್ಲಿ ಒಂದು ಮೊಟ್ಟೆಯ ಬೆಲೆ 8 ರೂ. ತಲುಪಿದ್ದು, ಪ್ರತಿ ಮೊಟ್ಟೆಗೆ ಮುಖ್ಯ ಶಿಕ್ಷಕರು ತಮ್ಮ ಕೈಯಿಂದ 2 ರೂ. ಭರಿಸಬೇಕಾಗಿದೆ. ಉದಾಹರಣೆಗೆ 100 ಮಕ್ಕಳಿರುವ ಶಾಲೆಯಲ್ಲಿ ದಿನಕ್ಕೆ 200 ರೂ. ನಂತೆ ವಾರಕ್ಕೆ 800 ಕ್ಕೂ ಹೆಚ್ಚು ರೂಪಾಯಿಗಳನ್ನು ಶಿಕ್ಷಕರೇ ಭರಿಸುತ್ತಿದ್ದು, ಇದು ತೀವ್ರ ನೋವಿನ ಸಂಗತಿಯಾಗಿದೆ. ಆದ್ದರಿಂದ ಆಯಾ ದಿನದ ಮಾರುಕಟ್ಟೆ ದರಕ್ಕೆ ಅನುಗುಣವಾಗಿ ಹಣ ಬಿಡುಗಡೆ ಮಾಡಬೇಕು ಎಂದು ಮನವಿ ಮಾಡಿದ್ದಾರೆ.

ಜಿಲ್ಲೆಯ ಗಣಿ ಪ್ರದೇಶಗಳಾದ ಗುಬ್ಬಿ, ಚಿಕ್ಕನಾಯಕನಹಳ್ಳಿ ಹಾಗೂ ತಿಪಟೂರು ತಾಲೂಕಿನ ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಲು ಸರ್ಕಾರ ಕಡ್ಲೆಕಾಳು, ಹೆಸರುಕಾಳು ಮತ್ತು ಕಡ್ಲೆಬೀಜ ವಿತರಿಸಲು ಆದೇಶಿಸಿದೆ. ಇದಕ್ಕಾಗಿ ಸರ್ಕಾರ ಕೆ.ಜಿ.ಗೆ ಕೇವಲ 83 ರೂ. ನಿಗದಿಪಡಿಸಿದೆ. ಆದರೆ ಮಾರುಕಟ್ಟೆಯಲ್ಲಿ ಕಡ್ಲೆಕಾಳು ಕೆ.ಜಿ.ಗೆ 120 ರೂ., ಹೆಸರುಕಾಳು 120 ರಿಂದ 150 ರೂ. ಹಾಗೂ ಕಡ್ಲೆಬೀಜ 180 ರೂ. ವರೆಗಿದೆ. ಈ ಬೆಲೆ ವ್ಯತ್ಯಾಸವೂ ಮುಖ್ಯ ಶಿಕ್ಷಕರ ಮೇಲೆಯೇ ಬೀಳುತ್ತಿದೆ ಎಂದು ವಿವರಿಸಿದ್ದಾರೆ.

ಸರ್ಕಾರ ತಕ್ಷಣವೇ ಮಾರುಕಟ್ಟೆ ದರವನ್ನು ಪರಿಶೀಲಿಸಿ, ಅದಕ್ಕೆ ತಕ್ಕಂತೆ ಹಣ ಬಿಡುಗಡೆ ಮಾಡಬೇಕು. ಇದರಿಂದ ಮುಖ್ಯ ಶಿಕ್ಷಕರ ಮೇಲಿನ ಆರ್ಥಿಕ ಹೊರೆ ತಪ್ಪಲಿದ್ದು, ಶಿಕ್ಷಕರು ಯಾವುದೇ ಆತಂಕವಿಲ್ಲದೆ ನೆಮ್ಮದಿಯಿಂದ ಪಾಠ ಮಾಡಲು ಅನುಕೂಲವಾಗುತ್ತದೆ ಎಂದು ಆರ್.ಪರಶಿವಮೂರ್ತಿ ಅಭಿಪ್ರಾಯಪಟ್ಟರು.

# ಜಿಲ್ಲಾ ಬಿಜೆಪಿ ಮೋರ್ಚಾಪದಾಧಿಕಾರಿಗಳ ಪಟ್ಟಿತಡೆ

## ಮುಖಂಡರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಸೂಚನೆ



ತುಮಕೂರು: ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಜಿಲ್ಲಾ ಮೋರ್ಚಾಪದಾಧಿಕಾರಿಗಳ ಪಟ್ಟಿಯನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್‌ಗೌಡ ಅವರು ತಾತ್ಕಾಲಿಕವಾಗಿ ತಡೆಹಿಡಿದಿದ್ದಾರೆ.

ಕೊರಟಗೆರೆ ಬಿಜೆಪಿ ಮುಖಂಡ ಹಾಗೂ ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಬಿಜೆಪಿ ಕೋರ್‌ಕಮಿಟಿ ಸದಸ್ಯ ಬಿ.ಹೆಚ್. ಅನಿಲ್‌ಕುಮಾರ್ ನೇತೃತ್ವದಲ್ಲಿ ಜಿಲ್ಲಾ ಹಾಗೂ ತಾಲ್ಲೂಕುಬಿಜೆಪಿ ಪದಾಧಿಕಾರಿಗಳು ಹಾಗೂ ವಿವಿಧ ಮೋರ್ಚಾ ಪದಾಧಿಕಾರಿಗಳು ಬುಧವಾರರಾಜ್ಯಾಧ್ಯಕ್ಷ ವಿಜಯೇಂದ್ರ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಮ್‌ಗೌಡ ಅವರನ್ನು ಭೇಟಿ ಮಾಡಿ, ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ನೂತನ ಪದಾಧಿಕಾರಿಗಳ ಪಟ್ಟಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಬಿಜೆಪಿ ರಾಜ್ಯಾಧ್ಯಕ್ಷರು ಹಾಗೂ ರಾಜ್ಯ ಪ್ರಧಾನ ಕಾರ್ಯದರ್ಶಿಯವರು, ಮಧುಗಿರಿ ಜಿಲ್ಲಾ ನೂತನ ಪದಾಧಿಕಾರಿಗಳ ಪಟ್ಟಿಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲು ಸೂಚಿಸಿದರು.ಜಿಲ್ಲಾ ಮುಖಂಡರು ಹಾಗೂ ಪದಾಧಿಕಾರಿಗಳೊಂದಿಗೆ ಚರ್ಚಿಸಿ, ಪಕ್ಷದಕಾರ್ಯಕರ್ತರು ಮತ್ತು ಸಂಘಟನೆಯ ನಡುವೆಯಾವುದೇರೀತಿಯ ಗೊಂದಲ ಉಂಟಾಗದಂತೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು. ಯಾವುದೇ ಭಿನ್ನಾಭಿಪ್ರಾಯಗಳಿದ್ದಲ್ಲಿ ಜುಲೈ 10ರಂದು ಸಭೆ ನಡೆಸಿ,ಎಲ್ಲರ ಅಭಿಪ್ರಾಯ ಪಡೆದು ಮುಂದಿನ ಜಿಲ್ಲಾ ಮೋರ್ಚಾ ಪದಾಧಿಕಾರಿಗಳನ್ನು ಆಯ್ಕೆ ಮಾಡುವಂತೆ ನಿರ್ದೇಶನ ನೀಡಿದರು ಎಂದು ಮಧುಗಿರಿ ಜಿಲ್ಲಾ ಕೋರ್‌ಕಮಿಟಿ ಸದಸ್ಯ ಬಿ.ಹೆಚ್. ಅನಿಲ್‌ಕುಮಾರ್ ತಿಳಿಸಿದ್ದಾರೆ.

# ಮಹಿಳೆಯರ ಸುರಕ್ಷತೆ, ಭದ್ರತೆ, ಸಬಲೀಕರಣಕ್ಕೆ ಕಾನೂನು ಅರಿವು ಅಗತ್ಯ



ಪಾವಗಡ: ಸರ್ಕಾರದ ಮಿಷನ್ ಶಕ್ತಿ ಯೋಜನೆಯ ಮಹಿಳಾ ಸಬಲೀಕರಣ ಘಟಕದಲ್ಲಿ ಮಹಿಳೆಯರ ಸುರಕ್ಷತೆ, ಭದ್ರತೆ ಮತ್ತು ಸಬಲೀಕರಣಕ್ಕಾಗಿ ಕಾನೂನು ಅರಿವು ಅಗತ್ಯವಾದ ಒಂದು ಮಿಷನ್ ಮೋಡ್ ಯೋಜನೆಯಾಗಿದೆ ಎಂದು ಜಿಲ್ಲಾ ಮಿಷನ್ ಸಂಯೋಜಕ ಶಶಿಧರ, ಹೆಚ್.ಜಿ. ವಿದ್ಯಾರ್ಥಿಗಳಿಗೆ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಹಿಳಾ ಸಬಲೀಕರಣ ಘಟಕ, ತುಮಕೂರು ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜು ಪಾವಗಡ ಇವರ ಸಂಯುಕ್ತಾಶ್ರಯದಲ್ಲಿ ಜೂನ್ 30ರ (ಸೋಮವಾರ) ಕಾನೂನು ಅರಿವು ಮತ್ತು ನೆರವು ಕಾರ್ಯಕ್ರಮವನ್ನು ಅವರು ಉದ್ಘಾಟಿಸಿ ಮಾತನಾಡಿ, ಬೇಟಿ ಬಚಾವೋ ಬೇಟಿ ಪಡಾವೋ, ಪ್ರಧಾನಮಂತ್ರಿ ಮಾತೃವಂದನಾ ಯೋಜನೆ, ಐ.ಸಿ.ಡಿ.ಎಸ್ ಯೋಜನೆ, ಪೌಷ್ಠಿಕ ಪುನರ್ವಸತಿಕೇಂದ್ರ, ನರೇಗಾ ಯೋಜನೆ, ವರ-ದಕ್ಷಿಣೆ, ವಧು-ದಕ್ಷಿಣೆ, ಮಹಿಳಾ ಸಬಲೀಕರಣ ಮಹತ್ವ ಮತ್ತು ಹೆಣ್ಣು ಮಕ್ಕಳ ಶಿಕ್ಷಣದ ಮಹತ್ವದ ಬಗ್ಗೆ ತಿಳಿಸಿದರು.

ಮಹಿಳೆಯರಿಗೆ ತಮ್ಮ ಕಾನೂನು ಹಕ್ಕುಗಳು, ಉಚಿತ ಕಾನೂನು ನೆರವು ಹಾಗೂ ಕಾನೂನು ಸಲಹೆಗಳನ್ನು ಪಡೆಯುವ ವಿಧಾನಗಳ ಕುರಿತು ಜಾಗೃತಿ ಮೂಡಿಸಲಾಯಿತು. ಮಕ್ಕಳ ಪಾಲನೆ ಮತ್ತು ಇತರೆ ಕಾನೂನು ಸಂಬಂಧಿತ ವಿಷಯಗಳಲ್ಲಿ ಮಹಿಳೆಯರು ಪಡೆಯಬಹುದಾದ ಕಾನೂನು ರಕ್ಷಣೆಗಳ ಬಗ್ಗೆ ಮಾಹಿತಿ ಹೇಳಿದರು.

ಜಂಡರ್ ಸ್ಪೆಷಲಿಸ್ಟ್ ರಶ್ಮಿ ಆರ್. ಮೇತ್ರಿ ವ್೦ಾತ್ನಾಡಿ, ಮಹಿಳೆಯರು ಕೆಲಸ ಮಾಡುವ ಸ್ಥಳಗಳಲ್ಲಿ ಲೈಂಗಿಕ ಕಿರುಕುಳವನ್ನು ತ್ಡ್೦ು೦ಲು, ನಿಷೇಧಿಸಲು ಮತ್ತು ಪರಿಹರಿಸಲು ಜಾರಿಗೆ ಬಂದ ಕಔಖಊ (ಕಿಡಿಜತಜಟಣುಟಟಿ ಠಜಿ ಖಜಥಿಣಚಿಟ ಊಚಿಡಿಚಿಟಚಿಜಟಣ) ಕಾಯ್ದೆ ಕಾನೂನು ಆಗಿದೆ. ಕಾಯ್ದೆಯಡಿ ಲೈಂಗಿಕ ಕಿರುಕುಳ, ಸುರಕ್ಷಿತಸ್ಪರ್ಶ ಮತ್ತು ಅಸುರಕ್ಷಿತ ಸ್ಪರ್ಶ ಬಗ್ಗೆ ಮಕ್ಕಳಿಗೆ ಬಾಲ್ಯದಲ್ಲೇ ತಿಳಿಸಿಕೊಡುವುದು ಅತ್ಯಗತ್ಯ. ಪ್ರೀತಿ, ಕಾಳಜಿ, ಭದ್ರತೆ ತೋರುವ ಸ್ಪರ್ಶ (ಅಪ್ಪುಗೆ, ಬೆನ್ನುತಟ್ಟುವುದು)-ಸುರಕ್ಷಿತ. ಅಹಿತಕರ, ಭಯ, ಆತಂಕ, ಬಲವಂತ ಅಥವಾ ಗುಪ್ತ ಅಂಗಗಳನ್ನು ಮುಟ್ಟುವ ಸ್ಪರ್ಶ-ಅಸುರಕ್ಷಿತ ಇಂತಹ ಸಂದರ್ಭದಲ್ಲಿ ಬೇಡ ಎಂದು ಧೈರ್ಯವಾಗಿ ಹೇಳಿ ತಕ್ಷಣವೇ ಪೋಷಕರಿಗೆ ತಿಳಿಸಬೇಕು ಎಂದು ತಿಳಿಸಿದರು. ಸಖಿ ಕೇಂದ್ರದಲ್ಲಿ ಒದಗಿಸುವ ಸೇವೆಗಳ ಮಾಹಿತಿ ನೀಡಿದರು.

ಲೆಕ್ಕಾಧಿಕಾರಿ ಪೂಜಾಶ್ರೀ ಎಸ್., ಮಾತನಾಡಿ, ಭಾರತದಲ್ಲಿ ಮಹಿಳಾ ಸಹಾಯವಾಣಿ 181 ಇದು ಮಹಿಳೆಯರ ತುರ್ತು ರಕ್ಷಣಾ ಸಹಾಯವಾಣಿ 24*7 ಕಾರ್ಯನಿರ್ವಹಿಸುವ ಈ ಸೇವೆಯಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ, ಮನೆ ಹಿಂಸೆ, ಸೈಬರ್ ಕಿರುಕುಳ, ಅಪಹರಣ ಅಥವಾ ಇನ್ನೊಂದು ತುರ್ತು ಸಂದರ್ಭದಲ್ಲಿ ಪೊಲೀಸ್, ಒನ್ ಸ್ಟಾಪ್ ಸೆಂಟರ್, ಆಸ್ಪತ್ರೆ ಮತ್ತು ಕಾನೂನು ಸಹಾಯ (ವಕೀಲ, ಎನ್‌ಜಿಒ) ಸೇವೆಗಳಿಗೆ ಕರೆ ಮಾಡುವ ಮೂಲಕ ದೂರು ನೀಡಬಹುದು. ಮಕ್ಕಳ ಸಹಾಯವಾಣಿ 1098, ಹಾಗೂ ಸಹಾಯವಾಣಿ112 ತುರ್ತು ಮತ್ತು ರಕ್ಷಣಾ ಸೇವೆಗಳಿಗೆ ಸಂಬಂಧಪಟ್ಟ ಮಾಹಿತಿ ಅಥವಾ ಕರೆ ಮಾಡುವ ಬಗ್ಗೆ ವಿದ್ಯಾರ್ಥಿಗಳಿಗೆ ವಿವರವಾಗಿ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ್ದ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ರಾಮಕೃಷ್ಣಪ್ಪ ಮಾತನಾಡಿದರು. ಮುಖ್ಯ ಅತಿಥಿಗಳಾಗಿ ಕಾಲೇಜಿನ ಹಿರಿಯ ಉಪನ್ಯಾಸಕಿ ದ್ರಾಕ್ಷಾಯಣಿ ಎಮ್.ಕೆ., ಹಿರಿಯ ಉಪನ್ಯಾಸಕ ಕರಿಯಣ್ಣ ಬಿ.ಎಮ್., ಕಾಲೇಜಿನ ಬೋಧಕರು ಮತ್ತು ಬೋಧಕೇತರರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ನಗರದ35ವಾರ್ಡುಗಳಿಂದ232ಬೂತ್‌ಗಳಿದ್ದು,ಪ್ರತಿ ಮನೆಗೆ ಬಿಲ್‌ಎಲ್‌ಓಗಳು ಬರುತ್ತಾರೆ



ತುಮಕೂರು: ರಾಜ್ಯದಲ್ಲಿ ಚುನಾವಣಾ ಆಯೋಗದಿಂದ ವಿಶೇಷ ಮತದಾರರ ಪಟ್ಟಿ ಪರೀಕ್ಷರಣೆ(ಎಸ್.ಐ.ಆರ್.) ನಡೆಯುತ್ತಿದ್ದು, ತುಮಕೂರು ನಗರದ 35 ವಾರ್ಡುಗಳ ಜನರು ತಮ್ಮ ಮನೆಯ ಬಳಿ ಬರುವ ಬಿ.ಎಲ್.ಓಗಳು ನೀಡುವ ನೊಂದಣಿ ಫಾರಂಗೆ ಸೂಕ್ತ ಮಾಹಿತಿ ತುಂಬುವ ಮೂಲಕ ತಮ್ಮ ಮತದಾನದ ಹಕ್ಕನ್ನು ಪಡೆಯುವಂತೆ ಮಾಜಿ ಶಾಸಕ ಡಾ.ಎಸ್.ಷಪಿ ಅಹಮದ್ ಕರೆ ನೀಡಿದ್ದಾರೆ.

ನಗರದ ಮಕ್ಕಾ ಮಸೀದಿಯಲ್ಲಿ ಹಮ್ಮಿಕೊಂಡಿದ್ದ ಎಸ್.ಐ.ಆರ್ ಮಾಹಿತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು,ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಎಸ್.ಐ.ಆರ್.ನಿಂದ ಯಾರು ಸಹ ಮತದಾನದ ಹಕ್ಕು ಕಳೆದುಕೊಳ್ಳಬಾರದೆಂಬ ಉದ್ದೇಶದಿಂದ ಪ್ರತಿಯೊಬ್ಬರು ತಮ್ಮ ಹೆಸರನ್ನು ನೊಂದಾಯಿಸು ವಂತೆ ನೋಡಿಕೊಳ್ಳಬೇಕಾಗಿದೆ ಎಂದರು.

ನಗರದ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಮ್ಯಾಫಿಂಗ್ ಕಾರ್ಯ ಒಂದು ಹಂತದಲ್ಲಿ ಪೂರ್ಣಗೊಂಡಿದ್ದು, ಜೂನ್ 30 ರಿಂದ ಜುಲೈ 29 ರವರೆಗೆ ಚುನಾವಣಾ ಆಯೋಗದಿಂದ ನೇಮಕಗೊಂಡಿರುವ ಬಿಎಲ್‌ಓಗಳು ಪ್ರತಿ ಮನೆಗೆಭೇಟಿನೀಡಿಮತದಾರರಪಟ್ಟಿನೊಂದಣಿ ಫಾರಂ(ಎನಬರೇಷನ್)ನೀಡಲಿದ್ದು, ಮತದಾರರು ಪ್ರಜ್ಞಾಪೂರ್ವಕವಾಗಿ ಫಾರಂ ಓದಿ, ಅರ್ಥ ಮಾಡಿಕೊಂಡು,ತಪ್ಪಿಲ್ಲದಂತೆ ಭರ್ತಿ ನೀಡಿ ನೀಡಬೇಕಿದೆ.ಸಾರ್ವಜನಿಕರು ಬಿಎಲ್‌ಓಗಳೊಂದಿಗೆ ಸಹಕರಿಸಿ,ನಮ್ಮ ಪ್ರಜಾಸತ್ತಾತ್ಮಕ ಹಕ್ಕುಗಳನ್ನು ಉಳಿಸಿಕೊಳ್ಳೋಣ ಎಂದು ಡಾ.ಎಸ್. ಷಪಿಅಹಮ್ಮದ್ ತಿಳಿಸಿದರು.

ತುಮಕೂರು ನಗರದ 35 ವಾರ್ಡುಗಳಿಂದ 232 ಬೂತ್‌ಗಳಿದ್ದು,ಪ್ರತಿ ಮನೆಗೆ ಬಿಲ್‌ಎಲ್‌ಓಗಳು ಬರುತ್ತಾರೆ. ಆ ಸಂದರ್ಭದಲ್ಲಿ ಜನರು ತಮ್ಮ ಏನೇ ಕೆಲಸ ಇದ್ದರು ಬದಿಗೊತ್ತಿ, ಮತದಾರರ ನೊಂದಣಿ ಫಾರಂ ಭರ್ತಿ ಮಾಡಿ ಸಲ್ಲಿಸುವ ಮೂಲಕ ಲೋಪದೋಷವಿಲ್ಲದ ಮತದಾರರ ಪಟ್ಟಿ ಸಿದ್ದಪಡಿಸಲು ನಾವೆಲ್ಲರೂ ಸರಕಾರದೊಂದಿಗೆ, ಚುನಾವಣಾ ಆಯೋಗದೊಂದಿಗೆ ಕೈಜೋಡಿಸಬೇಕಾಗಿದೆ.ಈಗಾಗಲೇ ಪ್ರತಿ ಬೂತಗೆ ಇಬ್ಬರಂತೆ ಬಿಎಲ್‌ಓ ಜೊತೆಗೆ ಸ್ವಯಂ ಸೇವಕರನ್ನು ಸಹ ನೇಮಕ ಮಾಡಿದೆ. ಅವರ ಸಹಾಯ ಪಡೆದು, ತಪ್ಪಿಲ್ಲದಂತೆ ಮತದಾರರ ನೊಂದಣಿ ಫಾರಂ ಭರ್ತಿ ಮಾಡಿ, ಬಿಎಲ್‌ಓ ಅವರಿಗೆ ತಲುಪಿಸುವ ಜವಾಬ್ದಾರಿ ಪ್ರತಿ ಮತದಾರನಾಗಿದೆ ಎಂದು ಡಾ.ಎಸ್.ಷಪಿ ಅಹಮದ್ ನುಡಿದರು.

ವಿಧಾನಪರಿಷತ್ ಸದಸ್ಯ,ಹಾಗೂ ಎಸ್.ಐ.ಆರ್ ತುಮಕೂರು ಜಿಲ್ಲಾ ಉಸ್ತುವಾರಿ ರಮೇಶಬಾಬು ಮಾತನಾಡಿ, ಕಾಂಗ್ರೆಸ್ ಪಕ್ಷದಿಂದ ನಗರದ ಬಾರ್‌ಲೈನ್ ರಸ್ತೆಯಲ್ಲಿರುವ ಮಕ್ಕಾ ಮಸೀದಿಯಲ್ಲಿ ಎಸ್.ಐ.ಆರ್.ಕಾರ್ಯಾಗಾರ ಹಮ್ಮಿಕೊಂಡಿದೆ.ನಮ್ಮ ಪಕ್ಷದ ಬಿಲ್.ಎಲ್.ಎ 2 ಗಳು ಪ್ರತಿ ಮತದಾರರ ಮನೆಗೆ ಭೇಟಿ ನೀಡಿ, ಮತದಾರರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದಾರೆ.ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಮಾಜಿ ಶಾಸಕರಾದ ಡಾ.ಎಸ್.ಷಪಿಅಹಮದ್ ಅವರ ನೇತೃತ್ವದಲ್ಲಿ ಇಂದು ಕಾರ್ಯಗಾರ ನಡೆಸಿ, ಮಾಹಿತಿ ನೀಡುವ ಕೆಲಸ ಮಾಡಲಾಗುತ್ತಿದೆ ಎಂದರು.

ಎಪಿಸಿಆರ್‌ನ ಅಡ್ವಕೇಟ್ ತಾಹೀರ್ ಹುಸೇನ್ ಅವರು ಪಿಪಿಟಿ ಮೂಲಕ ಎಸ್.ಐ.ಆರ್.ನ ಮತದಾರರ ನೊಂದಣಿ ಫಾರಂ ತುಂಬುವುದು ಹೇಗೆ,ಇದರ ಮಹತ್ವವೇನು ಎಂಬುದನ್ನು ಮನವರಿಕೆ ಮಾಡಿಕೊಟ್ಟರು.

ಈ ವೇಳೆ ಮುಖಂಡರಾದ ಅಫ್ತಾಬ್ ಅಹಮದ್,ನದೀಮ್ ಪಾಷ(ಚಿಚ್ಚ), ತಾಜುದ್ದೀನ್ ಷರೀಫ್, ಬಿಎಲ್‌ಓ ಕವಿತಾ, ಶಬ್ಬೀರ ಅಹಮದ್, ಅಜ್ಞಲ್‌ಖಾನ್, ಅಬ್ದುಲ್ ಸುಭಾನ್ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

# ಎಸ್‌ಐಆರ್‌ಮತಪಟ್ಟಿಪರಿಸ್ಕರಣೆಅತ್ಯವಶ್ಯಕವಾಗಿದ್ದು, ಸಾರ್ವಜನಿಕರು ಯಶಸ್ವಿಗೊಳಿಸಿ:ಉಗ್ರೇಶ್



ಶಿರಾ:ಎಸ್‌ಐಆರ್ ಮತ ಪಟ್ಟಿ ಪರಿಸ್ಕರಣೆ ಅತ್ಯವಶ್ಯಕವಾಗಿದ್ದು, ಚುನಾವಣಾ ಆಯೋಗ ಕೈಗೊಂಡಿರುವ ಈ ಮಹತ್ವದ ಕೆಲಸದಲ್ಲಿ ಎಲ್ಲರು ಪಾಲ್ಗೊಂಡು, ಅಧಿಕಾರಿಗಳು ದ್ವಿಪ್ರತಿಯಲ್ಲಿ ನೀಡುವ ಅರ್ಜಿ ನಮೂನೆಯಲ್ಲಿ ಸೂಕ್ತ ಮಾಹಿತಿಯೊಂದಿಗೆ ನೀಡುವ ಮೂಲಕ ನಮ್ಮ ಮತ, ನಮ್ಮ ಹಕ್ಕು ಧ್ಯೇಯ ವಾಕ್ಯದೊಂದಿಗೆ ಮುನ್ನಡೆದು ಮತಪಟ್ಟಿ ಸಂಸ್ಕರಣ ಅಭಿಯಾನ ಯಶಸ್ವಿಗೊಳಿಸಬೇಕು ಎಂದು ಶಿರಾ ಜೆಡಿಎಸ್ ಮುಖಂಡ ಆರ್. ಉಗ್ರೇಶ್ ಹೇಳಿದರು.

ಅವರು ಶಿರಾ ತಾಲೂಕಿನ ಆದಲೂರು ಗ್ರಾಮದಲ್ಲಿ ಮತಪಟ್ಟಿ ಪರಿಷ್ಕರಣೆ ಅಧಿಕಾರಿಗಳಿಂದ ಮತನೊಂದಣಿ ಅರ್ಜಿ ಸ್ವೀಕರಿಸಿ ಮಾತನಾಡಿದರು.

ಜೆಡಿಎಸ್ ಪಕ್ಷ ಕೂಡ ಎಸ್ ಐ ಆರ್ ಯಶಸ್ವಿಗೊಳಿಸಲು ಶಿರಾ ಕ್ಷೇತ್ರದಾದ್ಯಂತ 290 ಮತಗಟ್ಟೆಗಳಲ್ಲಿ ಬಿಎಲ್‌ಎ ಗಳನ್ನು ನೇಮಕ ಮಾಡಿದ್ದು ಇವರು ಕೂಡ ಸಾರ್ವಜನಿಕರಿಗೆ ಸೂಕ್ತ ಮಾಹಿತಿ ನೀಡಿ ನೊಂದಣಿ ಕಾರ್ಯದಲ್ಲಿ ಸಹಾಯ ಮಾಡಲಿದ್ದಾರೆ.

ಮತ ಪಟ್ಟಿ ಪರಿಷ್ಕರಣೆ ಬಗ್ಗೆ ಸಾರ್ವಜನಿಕರು ಯಾವುದೇ ಆತಂಕ ಪಡುವ ಅವಶ್ಯಕತೆ ಇಲ್ಲ ಎಲ್ಲವೂ ಕಾನೂನು ಬದ್ಧವಾಗಿಯೇ ನಡೆಯಲಿದೆ, ನಿಮ್ಮ ಹಕ್ಕನ್ನು ಪಡೆಯಲು ಕಡ್ಡಾಯವಾಗಿ ಎಸ್‌ಐಆರ್ ಮತಪಟ್ಟಿ ಸಂಸ್ಕರಣ ದಲ್ಲಿ ಪಾಲ್ಗೊಂಡು ಮತ ಮರು ನೊಂದಣಿ ಮಾಡಿ, ಅರ್ಜಿ ಸ್ವೀಕಾರವಾದ ನಂತರ ಮತ ಪಟ್ಟಿಯಲ್ಲಿ ಹೆಸರು ಬಂದಿದೆಯೋ ಇಲ್ಲವೋ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು ಇದು ನಮ್ಮ ನಿಮ್ಮೆಲ್ಲರ ಜವಾಬ್ದಾರಿ ಎಂದರು.

ಶಿರಾ ವಿಧಾನಸಭಾ ಕ್ಷೇತ್ರ ಮತದಾರರ ನೋಂದಣಾಧಿಕಾರಿ ಕೆ. ರುದ್ರೇಶ್ ಮಾತನಾಡಿ ಮತಪಟ್ಟಿ ಪರಿಷ್ಕರಣೆ ಜೂ 30 ರಿಂದ ಪ್ರಾರಂಭವಾಗಿದ್ದು ಜುಲೈ 29.ರವರಿಗೂ ನಡೆಯಲಿದೆ, ತಾಲೂಕಿನ ಪ್ರತಿ ಗ್ರಾಮದಲ್ಲಿ ಬಿ ಎಲ್ ಓ ಗಳನ್ನು ನೇಮಕ ಮಾಡಲಾಗಿದ್ದು ಅವರು ಮನೆಮನೆಗೆ ಭೇಟಿ ನೀಡಿ ದ್ವಿ ಪ್ರತಿಯಲ್ಲಿ ಅರ್ಜಿಗಳನ್ನು ನೀಡಲಿದ್ದಾರೆ. ಅರ್ಜಿಗಳನ್ನು ಪಡೆದು ಸೂಚಿಸಲಾಗಿರುವ ಮಾಹಿತಿಯೊಂದಿಗೆ ಭರ್ತಿ ಮಾಡಿ ಬಿ ಎಲ್ ಓ ಗಳಿಗೆ ಹಿಂತಿರುಗಿಸಬೇಕು. ಒಂದು ಪ್ರತಿಯನ್ನು ಕೊಟ್ಟಿರುವ ಮಾಹಿತಿಗಾಗಿ ತಮ್ಮ ಬಳಿಯಲ್ಲಿ ಮಾಹಿತಿಗಾಗಿ ಇಟ್ಟು ಕೊಳ್ಳಬೇಕು. ಚುನಾವಣಾ ಆಯೋಗ ಕೈಗೊಂಡಿರುವ ಮತಪಟ್ಟಿ ಪರಿಷ್ಕರಣೆ ಎಸ್‌ಐಆರ್ ಬಗ್ಗೆ ಮತದಾರರು ಯಾವುದೇ ಗೊಂದಲಗಳಿಗೆ ಈಡಾಗದೆ ಅರ್ಜಿ ಭರ್ತಿ ಮಾಡಿ ನೀಡಿದರೆ ಮತಪಟ್ಟಿಯಲ್ಲಿ ನಿಮ್ಮ ಹೆಸರು ನೋಂದಣಿಯಾಗಲಿದೆ. ಮತ ಪಟ್ಟಿಯಲ್ಲಿ ಹೆಸರಿದೆ ನೋಂದಣಿ ಮಾಡುವ ಅವಶ್ಯಕತೆ ಇಲ್ಲ ಎಂದು ನಿರ್ಲಕ್ಷ ಮಾಡುವಂತಿಲ್ಲ, ಕಡ್ಡಾಯವಾಗಿ ಎಲ್ಲರೂ ಅರ್ಜಿ ನಮೂನೆ ಪಡೆದು ಮತ ನೋಂದಣಿ ಮಾಡಿಕೊಳ್ಳುವ ಮೂಲಕ ಚುನಾವಣಾ ಆಯೋಗ ಕೈಗೊಂಡಿರುವ ಈ ಕಾರ್ಯ ಯಶಸ್ಸು ಗೊಳಿಸಲು ಸಹಕರಿಸಬೇಕು.

ಮತಪಟ್ಟಿ ಪರಿಷ್ಕರಣೆ ಬಗ್ಗೆ ಯಾವುದೇ ತರಹದ ಮಾಹಿತಿ ಬೇಕಿದ್ದರೆ ಅರ್ಜಿ ನಮೂನೆ ಹಿಂಭಾಗದಲ್ಲಿ ನೀಡಲಾಗಿದೆ. ಎಲ್ಲಾ ಪಕ್ಷಗಳಲ್ಲಿ ನೇಮಕಗೊಂಡಿರುವ ಬಿ ಎಲ್ ಎ ಗಳು ಮತದಾರರಿಗೆ ಸೂಕ್ತ ಮಾಹಿತಿ ನೀಡಿ ಈ ಎಸ್‌ಐಆರ್ ಮತಪಟ್ಟಿ ಸಂಸ್ಕರಣೆ ಕಾರ್ಯವನ್ನು ಯಶಸ್ವಿಗೊಳಿಸಲು ಸಹಕರಿಸಬೇಕು. ದೇಶದ ಯಾವುದೇ ಚುನಾವಣೆಗಳಲ್ಲಿ ಮತ ಚಲಾವಣೆ ಮಾಡಲು ಮತಪಟ್ಟಿಯಲ್ಲಿ ಹೆಸರು ನೋಂದಣಿ ಕಡ್ಡಾಯವಾಗಿದೆ ಎಂದರು.

ಈ ಸಂದರ್ಭದಲ್ಲಿ ಬಿ ಎಲ್ ಓ ಮೇಲ್ವಿಚಾರಕರು ಹಾಗೂ ಬಿ ಎಲ್ ಓ ಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಯಶಸ್ವಿಯಾಗಿ ನಡೆದ ಸ್ನೇಹ ಸಮ್ಮಿಲನ ಕಾರ್ಯಕ್ರಮ



ಗೌರಿಬಿದನೂರು: 2003ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಕಾರ್ಯಕ್ರಮವು ಸಂಭ್ರಮದ ವಾತಾವರಣದಲ್ಲಿ ಅತ್ಯಂತ ಸರಳವಾಗಿ ನೆರವೇರಿತು.

ತಾಲ್ಲೂಕಿನ ವಾಟದಹೊಸಹಳ್ಳಿ ಗ್ರಾಮದ ಶ್ರೀ ಭಾರ್ಗವ ಪ್ರೌಢ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಸುಮಾರು ಎರಡು ದಶಕಗಳ ಬಳಿಕ ಒಂದೇ ವೇದಿಕೆಯಲ್ಲಿ ಸೇರಿದ್ದ ಶಾಲೆಯ ಹಳೆಯ ವಿದ್ಯಾರ್ಥಿಗಳು, ತಮ್ಮ ಶಾಲಾ ದಿನಗಳ ಸಿಹಿ ನೆನಪುಗಳನ್ನು ಮೆಲುಕು ಹಾಕಿದರು. ಪರಸ್ಪರ ಕುಶಲೋಪರಿ ವಿಚಾರಿಸಿಕೊಂಡು, ಜೀವನದ ಅನುಭವಗಳನ್ನು ಹಂಚಿಕೊಂಡರು.

ಕಾರ್ಯಕ್ರಮವನ್ನು ಶಾಲಾ ಸಂಸ್ಥಾಪಕ ವ್ಯವಸ್ಥಾಪಕರಾದ ಶ್ರೀ ಸತ್ಯ ನಾರಾಯಣ ರಾವ್ ಅವರು ಜ್ಯೋತಿ ಬೆಳಗುವುದರ ಮೂಲಕ ಚಾಲನೆ ನೀಡಿ ಮಾತನಾಡಿ, ಸ್ನೇಹ ಸಮ್ಮಿಲನವು ಕೇವಲ ಹಳೆಯ ನೆನಪುಗಳನ್ನು ಮೆಲುಕು ಹಾಕುವ ಕಾರ್ಯಕ್ರಮವಲ್ಲ, ಸಮಾಜಕ್ಕೆ ಉತ್ತಮ ಕೊಡುಗೆ ನೀಡುವ ವೇದಿಕೆಯಾಗಬೇಕು ,ಸಮಾಜಮುಖಿ ಕಾರ್ಯಗಳಲ್ಲಿ ನೀವೆಲ್ಲರೂ ಭಾಗವಹಿಸುವ ಸಂಕಲ್ಪವನ್ನು ಮೈಗೂಡಿಸಿಕೊಳ್ಳಬೇಕು ಎಂದ ಅವರು ಶಾಲೆಯನ್ನು ಹಂತ ಹಂತವಾಗಿ ಯಾವ ರೀತಿಯಲ್ಲಿ ಉನ್ನತಿಕರಿಸಲಾಯಿತು ಎಂಬುದನ್ನು ತುಂಬಾ ಅರ್ಥ ಪೂರ್ಣವಾಗಿ ತಿಳಿಸಿಕೊಟ್ಟರು. ನಂತರ ಪುಟ್ಟಪರ್ತಿ ಸಾಯಿಬಾಬಾ ಅವರ ಅನುಗ್ರಹದಿಂದ ಇಂದು ದೇಶಾದ್ಯಂತ ವಿವಿಧ ರಾಜ್ಯಗಳಲ್ಲಿಯೇ ಅಲ್ಲದೆ ವಿದೇಶಗಳಲ್ಲಿಯೂ ಸಹಾ ಉಚಿತ ಆರೋಗ್ಯ, ವಿದ್ಯೆ ಯನ್ನು ಬಡಜನರಿಗೆ ಯಾವುದೇ ಜಾತಿ, ಧರ್ಮ ಬೇದವಿಲ್ಲದೆ ಯಾವ ರೀತಿಯಲ್ಲಿ ಸೇವೆ ಮಾಡಲಾಗುತ್ತಿದೆ ಎಂಬುದನ್ನು ತಿಳಿಸಿ ಒಂದು ಚಿಕ್ಕ ಕಿರು ಚಿತ್ರವನ್ನು ಪ್ರದರ್ಶಿಸಿ ಅರ್ಥಯಿಸಿದರು.

ಹಳೆಯ ವಿದ್ಯಾರ್ಥಿನಿಯಾದ ಅನಿತಾ ಲಕ್ಷ್ಮಿ ಮಾತನಾಡಿ ನಾನು ಬೇರೆ ಶಾಲೆಗಳಲ್ಲಿ ಗುರುವಂದನಾ ಕಾರ್ಯಕ್ರಮವನ್ನು ವೀಕ್ಷಿಸಿ ನಮ್ಮ ಶಾಲೆಯಲ್ಲಿ ಇದೇ ರೀತಿಯಲ್ಲಿ ಆಚರಣೆ ಮಾಡಬೇಕು ಎನ್ನುವುದು ನನ್ನ ಅಪೇಕ್ಷೆಯಾಗಿತ್ತು, ಅದರಂತೆಯೇ ಈ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಆಯೋಜಿಸಿರುವುದು ನನಗೆ ತುಂಬಾ ಸಂತಸ ತಂದಿದೆ ಮುಂಬರುವ ದಿನಗಳಲ್ಲಿ ನಮ್ಮೆಲ್ಲಾ ಸ್ನೇಹಿತರ ಅಭಿಪ್ರಾಯದಂತೆ ಶಿಕ್ಷಕ ಶಿಕ್ಷಕಿಯರನ್ನು ಸಂಪರ್ಕಿಸಿ ಗುರುವಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಮಂಜುನಾಥ್ ಮಾತನಾಡಿ ಗುರುಗಳ ಆಶೀರ್ವಾದ,ಮಾರ್ಗದರ್ಶನ ನಮ್ಮ ಜೀವನದಲ್ಲಿ ಅಳವಡಿಸಿಕೊಂಡರೆ ನಾವೆಲ್ಲರೂ ಸಮಾಜದಲ್ಲಿ ಸತ್ಪ್ರಜೆಗಳಾಗಬಹುದು ಎಂದು ತಮ್ಮ ಅನಿಸಿಕೆಯನ್ನು ವ್ಯಕ್ತಪಡಿಸಿದರು .

ಕಾರ್ಯಕ್ರಮಕ್ಕೆ ಆಗಮಿಸಿದ್ದ ಪ್ರತಿಯೊಬ್ಬರು ತಮ್ಮ ಅನುಭವಗಳನ್ನು ತುಂಬಾ ಸಂತೋಷದಿಂದ ಹಂಚಿಕೊಳ್ಳಯಿತು.ಅಂದಿನ ಶಾಲಾ ದಿನಗಳನ್ನು ನೆನೆದರು.ಅನೇಕ ವರ್ಷಗಳ ನಂತರ ಒಂದೇ ವೇದಿಕೆಯಲ್ಲಿ ಸೇರಿ, ಶಾಲಾ ದಿನಗಳ ಸಿಹಿ ನೆನಪುಗಳನ್ನು ಮೆಲುಕು ಹಾಕಿದ ಕ್ಷಣಗಳು ನಿಜಕ್ಕೂ ಅಮೂಲ್ಯವಾಗಿದ್ದವು. ಪ್ರತಿಯೊಬ್ಬರೂ ಭಾಗವಹಿಸಿ ಕಾರ್ಯಕ್ರಮದ ಸಂಭ್ರಮವನ್ನು ಇನ್ನಷ್ಟು ಹೆಚ್ಚಿಸಿದರು.

ಪರಿಚಯ, ನೆನಪುಗಳ ಹಂಚಿಕೆ, ಸ್ನೇಹಿತರೊಂದಿಗೆ ಮುಕ್ತ ಸಂವಾದ, ಗುಂಪು ಛಾಯಾಚಿತ್ರ, ಕಿರು ಸನ್ಮಾನ, ಊಟದ ವ್ಯವಸ್ಥೆ ಸೇರಿದಂತೆ ಎಲ್ಲವೂ ಅತ್ಯಂತ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮದ ಪ್ರತಿಯೊಂದು ಕ್ಷಣವೂ ನಮ್ಮೆಲ್ಲರ ಜೀವನದಲ್ಲಿ ಮರೆಯಲಾಗದ ನೆನಪಾಗಿ ಉಳಿಯಲಿದೆ ಎಂದು ಪವಿತ್ರಾ ತಿಳಿಸಿದರು .ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಾದ ಮಂಜುನಾಥ್ ಎಸ್ , ಶ್ವೇತಾ, ಪವಿತ್ರಾ, ಆನಂದ, ಬಾಲಕೃಷ್ಣ, ಅನ್ಸರ್ ಭಾಷಾ, ಅಪ್ಸರ್ ಭಾಷಾ, ನರೇಶ್, ನರೇಂದ್ರ ಕುಮಾರ್ , ನಾಗೇಶ್, ಕಿರಣ್,ಅಮರ್ನಾಥ್, ನರಸಿಂಹ ಮೂರ್ತಿ, ಕೃಷ್ಣ ಮೂರ್ತಿ, ಎಂ ಡಿ ಶಿವಶಂಕರ, ಕುಟುಂಬ ಸದಸ್ಯರು ಹಾಗೂ ಶಿಕ್ಷಕರಾದ ಶಿವಮ್ಮ ,ಪಟೇಲ್, ಜಗದೀಶ್ ಸೇರಿದಂತೆ ಶಾಲಾ ಸಿಬ್ಬಂದಿ ಭಾಗವಹಿಸಿದ್ದರು.

## ವೀರಶೈವ ಲಿಂಗಾಯತ ನೌಕರರ ಸಂಘದಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಶಿರಾ:ಕರ್ನಾಟಕ ರಾಜ್ಯ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧಿ ಸಂಘ ಶಿರಾ ತಾಲೂಕು ಘಟಕದ ವತಿಯಿಂದ 2026ನೇ ಸಾಲಿನಲ್ಲಿ ಎಸ್. ಎಸ್.ಎಲ್.ಸಿ. ಮತ್ತು ಪಿಯುಸಿ ಪರೀಕ್ಷೆಯಲ್ಲಿ ಶೇ. 80ಕ್ಕಿಂತ ಹೆಚ್ಚು ಅಂಕ ಗಳಿಸಿದ ವೀರಶೈವ ಲಿಂಗಾಯತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಸಂಘದ ಅಧ್ಯಕ್ಷ ರಾಜಶೇಖರಯ್ಯ.ಕೆ.ಎನ್. ತಿಳಿಸಿದ್ದಾರೆ.

ವಿದ್ಯಾರ್ಥಿಗಳು ಅಂಕಪಟ್ಟಿ, ವರ್ಗಾವಣಾ ಪತ್ರ ಅಥವಾ ಜಾತಿ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಮೊಬೈಲ್ ನಂಬರಿನೊಂದಿಗೆ ವಾಸ ಸ್ಥಳದ ವಿಳಾಸ ನಮೂದಿಸಿ ಜುಲೈ 5 ರೊಳಗೆ ಅರ್ಜಿ ಸಲ್ಲಿಸುವಂತೆ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಎಂ.ನಾಗಭೂಷಣ್ ಮೊ: 9141659787, ತಿಪ್ಪೇಸ್ವಾಮಿ ಮೊ: 9972048083 ಸಂಪರ್ಕಿಸುವಂತೆ ಕೋರಿದ್ದಾರೆ.

# ಕಚ್ಚಾ ಬಾಂಬ್ ಕೊಟ್ಟಿರುವುದು ತನಿಖೆಯಲ್ಲಿ ಪತ್ತೆಯಾಗಿದೆ :ಎಸ್‌ಪಿ



ತುಮಕೂರು : ಶಿರಾ ಎನ್‌ಎಚ್ 28 ರಸ್ತೆಯಲ್ಲಿ ನಡೆದಿದ್ದ ಕಾರು ಸ್ಫೋಟ ಪ್ರಕರಣಕ್ಕೆ ಸಂಬಂಧಿಸಿದಂತೆ ಕಚ್ಚಾ ಬಾಂಬ್ ಬಳಕೆ ಮಾಡಿರುವುದನ್ನು ಖಚಿತಪಡಿಸಿಕೊಂಡು, ಕಚ್ಚಾ ಬಾಂಬ್ ಸರಬರಾಜು ಮಾಡಿದ್ದ ವ್ಯಕ್ತಿಯನ್ನು ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ಗ್ರಾಮದ ಚಂದಾವರ ಗ್ರಾಮದಲ್ಲಿ ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ ವಿ ತಿಳಿಸಿದ್ದಾರೆ.

ಜಂಟಿ ಕಾರ್ಯಾಚರಣೆ: ಜೂ.30ರಂದು ತುಮಕೂರು ವಿಶೇಷ ತನಿಖಾ ತಂಡ ಮತ್ತು ಉತ್ತರ ಕನ್ನಡ ಜಿಲ್ಲೆಯ ತನಿಖಾ ತಂಡಗಳು ಜಂಟಿಯಾಗಿ ಕಾಯಾಚರಣೆ ನಡೆಸಿತ್ತು. ಈ ವೇಳೆ ಜಾರ್ಜ್ ನಿಕ್ಲೊವ್ ಫರ್ನಾಂಡೀಸ್ ಎಂಬಾತನು ಕಾರು ಸ್ಫೋಟದಲ್ಲಿ ಮೃತಪಟ್ಟಿರುವ ನಾಗೇಂದ್ರನಿಗೆ ಕಚ್ಚಾ ಬಾಂಬ್ ಕೊಟ್ಟಿರುವುದು ಪತ್ತೆಯಾಗಿದೆ. ಅಲ್ಲದೇ ಸ್ಥಳೀಯ ವ್ಯಕ್ತಿಗಳಾದ ಸಂದೀಪ್ ಗೌಡ, ನಾರಾಯಣ ಡೊಲ್ಲುಗೌಡ ಮತ್ತು ನಾಗರಾಜು ಡೊಲ್ಲುಗೌಡ ಎಂಬುವರಿಗೂ ಆರೋಪಿ ಜಾರ್ಜ್ ನಿಕ್ಲೊವ್ ಫರ್ನಾಂಡೀಸ್ ಕಚ್ಚಾ ಬಾಂಬ್‌ಗಳನ್ನು ಕೊಟ್ಟಿರುವುದು ಪತ್ತೆಯಾಗಿದೆ ಎಂದರು. ಜಾರ್ಜ್ ನಿಕ್ಲೊವ್ ಫರ್ನಾಂಡೀಸ್ ಸ್ಥಳೀಯವಾಗಿ ಮೀನುಗಾರಿಕೆ ಉದ್ದೇಶಕ್ಕಾಗಿ ಕಚ್ಚಾ ಬಾಂಬ್ ಅನ್ನು ತಯಾರು ಮಾಡಿ ಮಾರಾಟ ಮಾಡಿರುವುದು ತನಿಖೆ ವೇಳೆ ಪತ್ತೆಯಾಗಿದೆ. ಅಲ್ಲದೇ ವಿಚಾರಣೆ ವೇಳೆ ಆರೋಪಿ ಜಾರ್ಜ್ ನಿಕ್ಲೊವ್ ಫರ್ನಾಂಡೀಸ್‌ಗೆ ಅನಾರೋಗ್ಯ ಉಂಟಾಗಿದ್ದರಿಂದ ಅಂಕೋಲಾ ಪೊಲೀಸರು ಕುಮಟಾ ಸರಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲು ಮಾಡಲಾಗಿದೆ. ಆಸ್ಪತ್ರೆಯಿಂದ ಬಿಡುಗಡೆ ಆದ ನಂತರ ತನಿಖೆ ಮುಂದುವರಿಸಲಾಗುವುದು ಎಂದರು.

ಜೂ.27ರಂದು ನಡೆದಿದ್ದ ಕಾರು ಬಾಂಬ್ ಸ್ಫೋಟಕ್ಕೆ ಸಂಬಂಧಿಸಿದಂತೆ ಸ್ಥಳದಲ್ಲಿ ಪತ್ತೆಯಾಗಿದ್ದ ಕಚ್ಚಾ ಬಾಂಬ್ ಅನ್ನು ಸಂರಕ್ಷಿಸಿಡಲಾಗಿತ್ತು. ಕೃತ್ಯ ನಡೆದ ಸ್ಥಳಕ್ಕೆ ಎಫ್‌ಎಸ್‌ಎಲ್ ತಂಡದ ಸಿಬ್ಬಂದಿ ಬಂದು ಸ್ಥಳದಲ್ಲಿ ದೊರೆತಿದ್ದ ಕಚ್ಚಾ ಬಾಂಬ್ ಅನ್ನು ಶಿರಾ ನಗರದ ಇಂಡಸ್ಟ್ರೀಯಲ್ ಏರಿಯಾದ ನಿರ್ಜನ ಪ್ರದೇಶದಲ್ಲಿ ಸ್ಫೋಟಿಸಿ ಅದರ ಅವಶೇಷಗಳನ್ನು ಸಂಗ್ರಹಿಸಿ ಎಫ್‌ಎಸ್‌ಎಲ್‌ಗೆ ಕಳುಹಿಸಿಕೊಡಲಾಗಿತ್ತು ಎಂದು ತಿಳಿಸಿದರು.

ಕಚ್ಚಾ ಬಾಂಬ್ ಎಲ್ಲಿಂದ ಯಾರಿಂದ ಹೇಗೆ ದೊರೆಯಿತು ಎಂಬ ಮೂಲವನ್ನು ಪತ್ತೆ ಹಚ್ಚಲು ಶಿರಾ ಉಪವಿಭಾಗದ ಡಿವೈಎಸ್ಪಿ ಬಿ.ಕೆ. ಶೇಖರ್ ಮತ್ತು ಶಿರಾ ಗ್ರಾಮಾಂತರ ವೃತ್ತದ ಸಿಪಿಐ ಡಿ.ಜೆ. ಶ್ರೀನಿವಾಸ್ ನೇತೃತ್ವದಲ್ಲಿ ಆರೋಪಿಗಳನ್ನು ಬಂಧಿಸಲು 15ಕ್ಕೂ ಸಿಬ್ಬಂದಿ ಮತ್ತು 3 ತಂಡಗಳನ್ನು ರಚನೆ ಮಾಡಲಾಗಿತ್ತು ಎಂದು ಮಾಹಿತಿ ನೀಡಿದರು.

# ಹುಳಿಯಾರಿನಲ್ಲಿ ಎಸ್‌ಐಆರ್ ಪ್ರಕ್ರಿಯೆ ಆರಂಭ

## ಮನೆ ಮನೆಗೆ ತೆರಳಿ ಗಣತಿ ನಮೂನೆ ವಿತರಿಸುತ್ತಿರುವ ಬಿಎಲ್‌ಒಗಳು



ಹುಳಿಯಾರು: ಮತದಾರರ ಪಟ್ಟಿಯನ್ನು ಅತ್ಯಂತ ನಿಖರ ಹಾಗೂ ನವೀಕೃತವಾಗಿಡುವ ಉದ್ದೇಶದಿಂದ, ಹುಳಿಯಾರು ಪಟ್ಟಣದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಅಧಿಕೃತವಾಗಿ ಚಾಲನೆ ನೀಡಲಾಯಿತು. ಇದರ ಅಂಗವಾಗಿ ನಿಯೋಜನೆಗೊಂಡಿರುವ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒಗಳು) ಪಟ್ಟಣದಾದ್ಯಂತ ಮನೆ ಮನೆಗೆ ಭೇಟಿ ನೀಡಿ, ಮತದಾರರಿಗೆ ಅಗತ್ಯವಿರುವ ಗಣತಿ ನಮೂನೆ ಅರ್ಜಿಗಳನ್ನು (ಎನ್ಯೂಮರೇಷನ್ ಫಾರಂ) ವಿತರಿಸುವ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ.

ಅರ್ಜಿ ಸಲ್ಲಿಸಲು ಅಧಿಕಾರಿಗಳ ಮನವಿ: ಮನೆ ಮನೆಗೆ ತೆರಳುತ್ತಿರುವ ಅಧಿಕಾರಿಗಳು ಸಾರ್ವಜನಿಕರಲ್ಲಿ ಗಣತಿ ನಮೂನೆಗಳನ್ನು ಯಾವುದೇ ಗೊಂದಲಗಳಿಗೆ ಆಸ್ಪದವಿಲ್ಲದಂತೆ, ನಿಖರವಾಗಿ ಭರ್ತಿ ಮಾಡಿ, ಅಗತ್ಯ ದಾಖಲಾತಿಗಳು ಹಾಗೂ ಭಾವಚಿತ್ರವನ್ನು ಲಗತ್ತಿಸಿ ನಿಗದಿತ ಅವಧಿಯೊಳಗೆ ತಮಗೆ ಸಲ್ಲಿಸಬೇಕೆಂದು ಮನವಿ ಮಾಡುತ್ತಿದ್ದಾರೆ.

ಯಾರೆಲ್ಲ ಅರ್ಜಿ ಸಲ್ಲಿಸಬಹುದು? : ಈ ವಿಶೇಷ ಪರಿಷ್ಕರಣೆಯ ಕುರಿತು ಬಿಎಲ್‌ಒ ರಂಗನಾಥ್ ಅವರು ಮಾಹಿತಿ ನೀಡಿ, 18 ವರ್ಷ ತುಂಬಿದ ಹೊಸ ಮತದಾರರ ಹೆಸರನ್ನು ಪಟ್ಟಿಗೆ ಸೇರ್ಪಡೆ ಮಾಡಲು, ನಿಧನರಾದ ಮತದಾರರ ಹೆಸರನ್ನು ಕೈಬಿಡಲು, ಮನೆ ಖಾಲಿ ಮಾಡಿ ಬೇರೆಡೆ ವಲಸೆ ಹೋದವರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲು ಹಾಗೂ ಮತದಾರರ ವೈಯಕ್ತಿಕ ವಿವರಗಳಲ್ಲಿ ಯಾವುದೇ ತಪ್ಪುಗಳಿದ್ದಲ್ಲಿ ತಿದ್ದುಪಡಿ ಮಾಡಿಕೊಳ್ಳಲು ಈ ಪ್ರಕ್ರಿಯೆಯಲ್ಲಿ ಮುಕ್ತ ಅವಕಾಶ ಕಲ್ಪಿಸಲಾಗಿದೆ. ಇದರೊಂದಿಗೆ ಒಂದಕ್ಕಿಂತ ಹೆಚ್ಚು ಕಡೆ ಮತದಾರರ ಪಟ್ಟಿಯಲ್ಲಿ ಹೆಸರಿದ್ದರೆ, ನಿಯಮಾನುಸಾರ ಒಂದೆಡೆ ಮಾತ್ರ ಉಳಿಸಿಕೊಳ್ಳಲು ಸಹ ಈ ವೇಳೆ ಅವಕಾಶವಿದೆ ಎಂದು ವಿವರಿಸಿದರು.

ಸಾರ್ವಜನಿಕರ ಸಹಕಾರಕ್ಕೆ ಮುಖ್ಯಾಧಿಕಾರಿ ಕರೆ : ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ಅವರು ಮಾತನಾಡಿ, "ಮತದಾರರ ಪಟ್ಟಿಯನ್ನು ದೋಷರಹಿತ ಹಾಗೂ ನವೀಕೃತವಾಗಿಡುವುದು ಅತ್ಯಗತ್ಯ. ಈ ನಿಟ್ಟಿನಲ್ಲಿ ಹಮ್ಮಿಕೊಳ್ಳಲಾಗಿರುವ ವಿಶೇಷ ಪರಿಷ್ಕರಣೆ ಕಾರ್ಯಕ್ಕೆ ಸಾರ್ವಜನಿಕರು ಹಾಗೂ ಎಲ್ಲ ಅರ್ಹ ಮತದಾರರು ಸಂಪೂರ್ಣವಾಗಿ ಸಹಕರಿಸಬೇಕು ಎಂದು ಕರೆ ನೀಡಿದರು.

ರಸೀದಿ ಪಡೆದುಕೊಳ್ಳಲು ಸೂಚನೆ: ಪರಿಷ್ಕರಣೆ ಕಾರ್ಯಕ್ಕೆ ನಿಯೋಜನೆಗೊಂಡಿರುವ ಮತಗಟ್ಟೆ ಅಧಿಕಾರಿಗಳು 2020 ರ ಜೂನ್ 16 ರವರೆಗಿನ ಮತದಾರರ ಪಟ್ಟಿಯಲ್ಲಿ ಹೆಸರಿರುವ ಪ್ರತಿ ಮತದಾರರ ಮನೆಗೂ ಭೇಟಿ ನೀಡಿ ಗಣತಿ ನಮೂನೆಯನ್ನು ತಲುಪಿಸಲಿದ್ದಾರೆ. ಮತಗಟ್ಟೆ ಅಧಿಕಾರಿಗಳು ಮನೆಗೆ ಬಂದಾಗ ಸಾರ್ವಜನಿಕರು ಸೂಕ್ತವಾಗಿ ಸ್ಪಂದಿಸಬೇಕು. ಭರ್ತಿ ಮಾಡಿದ ಅರ್ಜಿಯನ್ನು ನೀಡುವಾಗ ಅಧಿಕಾರಿಗಳು ಕೊಡುವ ಎರಡು ಪ್ರತಿಗಳಲ್ಲಿ ಒಂದನ್ನು ಅಧಿಕಾರಿಗಳಿಗೆ ಹಿಂದಿರುಗಿಸಿ, ಮತ್ತೊಂದರಲ್ಲಿ ಅವರ ಸಹಿ ಪಡೆದು ಮತದಾರರು ರಸೀದಿಯಾಗಿ ತಮ್ಮ ಬಳಿಯೇ ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು ಎಂದು ಈ ಸಂದರ್ಭದಲ್ಲಿ ತಿಳಿಸಲಾಯಿತು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್, ಆರ್‌ಒ ಶೃತಿ ಬನಾರ, ಬಿಎಲ್‌ಒ ರಂಗನಾಥ್, ಬಿಎಲ್‌ಎ ರಾಜ್‌ಕುಮಾರ್ ಮತ್ತು ಸನತ್ ಹಾಗೂ ಇತರೆ ಪ್ರಮುಖರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಪಕ್ಷ ಸಂಘಟನೆಗೆ ಒಗ್ಗಟ್ಟಿನಿಂದ ಶ್ರಮಿಸಿ: ಚಿದಾನಂದ್ ಗೌಡ

## ಗೋಪಿಕುಂಟೆ ಗ್ರಾಮದಲ್ಲಿ ಬಿಜೆಪಿ ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಮಾಸಿಕ ಸಭೆ



ಶಿರಾ:ಗ್ರಾಮೀಣ ಮಟ್ಟದಲ್ಲಿ ಪಕ್ಷವನ್ನು ಮತ್ತಷ್ಟು ಬಲಪಡಿಸುವ ಹಾಗೂ ಸರಕಾರದ ಜನಪರ ಯೋಜನೆಗಳನ್ನು ಪ್ರತಿಯೊಬ್ಬ ನಾಗರಿಕರಿಗೂ ತಲುಪಿಸುವ ನಿಟ್ಟಿನಲ್ಲಿ ಕಾರ್ಯಕರ್ತರು ಒಗ್ಗಟ್ಟಿನಿಂದ ಶ್ರಮಿಸಬೇಕು ಎಂದು ಬಿಜೆಪಿ ಮಧುಗಿರಿ ಸಂಘಟನಾತ್ಮಕ ಜಿಲ್ಲಾಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಚಿದಾನಂದ್ ಎಂ. ಗೌಡ ಕರೆ ನೀಡಿದರು.

ಅವರು ಶಿರಾ ತಾಲೂಕು ಹುಲಿಕುಂಟೆ ಹೋಬಳಿ ಗೋಪಿಕುಂಟೆ ಗ್ರಾಮದಲ್ಲಿ ಭಾರತೀಯ ಜನತಾ ಪಾರ್ಟಿ ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಶಿರಾ ಗ್ರಾಮಾಂತರ ಮಂಡಲದ ವತಿಯಿಂದ ಏರ್ಪಡಿಸಿದ್ದ ಮಾಸಿಕ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ಮುಂಬರುವ ತಾಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾವಣೆಗೆ ಕಾರ್ಯಕರ್ತರು ಸಜ್ಜಾಗಿ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಕಾರ್ಯ ಕಾರಿಣಿ ಸದಸ್ಯರಾದ ಬರಗೂರು ಶಿವಕುಮಾರ್, ಜಿಲ್ಲಾ ಉಪಾಧ್ಯಕ್ಷರಾದ ಹೊನ್ನಗೊಂಡನಹಳ್ಳಿ ಚಿಕ್ಕಣ್ಣ, ಜಿಲ್ಲಾ ಕಾರ್ಯದರ್ಶಿ ಕುಮಾರ್ ಮಾಸ್ಟರ್, ಗ್ರಾಮಾಂತರ ಮಂಡಲ ಅಧ್ಯಕ್ಷರಾದ ಈರಣ್ಣ ಪಟೇಲ್, ಪ್ರಧಾನ ಕಾರ್ಯದರ್ಶಿ ಭಾಸ್ಕರ್ ಮತ್ತು ಪುರುಷೋತ್ತಮ್, ಕಾರ್ಯದರ್ಶಿ ಶಾಮಿಯಾನ ಸಿದ್ದಪ್ಪ, ಯುವ ಮೋರ್ಚಾ ಅಧ್ಯಕ್ಷರಾದ ತಡಕಲೂರು ಹರೀಶ್, ಹಿರಿಯ ಮುಖಂಡರಾದ ಸದಾಶಿವಯ್ಯ, ಸಿದ್ದಲಿಂಗಪ್ಪ, ಶ್ರೀಧರ್, ಶಿವಣ್ಣ, ನಾದೂರು ಕುಮಾರ್, ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಮೂಗನಹಳ್ಳಿ ರಾಮು, ಜಗದೀಶ್, ಕೃಷ್ಣಪ್ಪ, ಮೂರ್ತಿ, ಚಿದಾನಂದ್, ನಾಗರಾಜಪ್ಪ ಸೇರಿದಂತೆ ಅನೇಕ ಮುಖಂಡರು ಕಾರ್ಯಕರ್ತರು ಹಾಗೂ ಪದಾಧಿಕಾರಿಗಳು ಹಾಜರಿದ್ದರು.

# ಕುಡಿಯುವ ನೀರು ಪೂರೈಕೆಗಾಗಿ ಪ್ರತಿ ಜಿಲ್ಲೆಗೆ 5 ಕೋಟಿ ಮೀಸಲು:ಜಿ.ಪರಮೇಶ್ವರ



ಬೆಳಗಾವಿ: ಬೆಳಗಾವಿ ಭಾಗದ ಸಮಸ್ಯೆಗಳ ಬಗ್ಗೆ, ವಿಶೇಷವಾಗಿ ಈ ವರ್ಷ ಮಳೆ ಕಡಿಮೆಯಾಗಿರುವುದರಿಂದ ಅನೇಕ ಸಮಸ್ಯೆಗಳು ಉಂಟಾಗಿದೆ. ಕುಡಿಯುವ ನೀರಿನ ಸಮಸ್ಯೆ, ಬೆಳೆ ನಾಶದಿಂದಾಗಿ ಜನರ ಮೇಲಾಗುತ್ತಿರುವ ಪರಿಣಾಮಗಳ ಬಗ್ಗೆ ಪರಿಶೀಲನೆ ನಡೆಸಿ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಉಪ ಮುಖ್ಯಮಂತ್ರಿಗಳಾದ ಡಾ. ಜಿ. ಪರಮೇಶ್ವರ ತಿಳಿಸಿದರು.

ಇಂದು ಬೆಳಗಾವಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿ ಜಿಲ್ಲೆಯಲ್ಲಿ ಬರದ ಛಾಯೆ ಕಾಣಿಸುತ್ತಿದೆ. ಹೀಗಾಗಿ ಕುಡಿಯುವ ನೀರಿಗೆ ಸಮಸ್ಯೆಯಾಗುವ ಸಾಧ್ಯತೆ ಹೆಚ್ಚಿದೆ. ಜೂನ್ ತಿಂಗಳಲ್ಲಿ ವಾಡಿಕೆಯಷ್ಟು ಮಳೆಯಾಗಿಲ್ಲ. ಇದರಿಂದ ಅಂತರ್ಜಲ ಮಟ್ಟ ಕುಸಿದಿದೆ. ಮುಂದಿನ ದಿನಗಳಲ್ಲಿ ಮಳೆ ಬಾರದಿದ್ದರೆ ಕಷ್ಟವಾಗಬಹುದು. ಹೀಗಾಗಿ ಮುನ್ನೆಚ್ಚರಿಕೆ ಕ್ರಮದ ಬಗ್ಗೆ ಚರ್ಚಿಸಿ, ಕುಡಿಯುವ ನೀರಿನ ಸಮರ್ಪಕ ಪೂರೈಕೆಗೆ ಸೂಚನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಈ ಸಂಬಂಧ ಪ್ಲಾನ್ ಆಫ್ ಕ್ಷನ್ ಮಾಡಿಕೊಳ್ಳಲಾಗಿದೆ. ಜಿಲ್ಲಾಧಿಕಾರಿಗಳು ಕಾರ್ಯಗತಗೊಳಿಸುತ್ತಾರೆ. ಕುಡಿಯುವ ನೀರಿಗಾಗಿ ಪ್ರತಿ ಜಿಲ್ಲೆಗೆ 5 ಕೋಟಿ ರೂ. ಮೀಸಲಿಡಲಾಗಿದೆ ಎಂದು ಮಾಹಿತಿ ನೀಡಿದರು.

ಕಂದಾಯ ಇಲಾಖೆಯಲ್ಲಿ ಪೌತಿ ಖಾತೆ, ಹಕ್ಕು ಪತ್ರ ವಿತರಣೆ, ಆಕಾರ್ ಬಂದ್, ಕಂದಾಯ ಗ್ರಾಮಗಳ ಘೋಷಣೆ ಮೂರು ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿದೆ. ಅದನ್ನು ಮತ್ತಷ್ಟು ವೇಗವಾಗಿ ಮಾಡಲು ತೀರ್ಮಾನಿಸಿದ್ದು, ಕಾಲಮಿತಿಯೊಳಗೆ ಪೂರ್ಣಗೊಳಿಸುವುದಾಗಿ ಹೇಳಿದರು.

ಧಾರ್ಮಿಕ ಇಲಾಖೆಯಲ್ಲಿ ವರ್ಗದ ದೇವಸ್ಥಾನಗಳ ಆಸ್ತಿ ಒತ್ತುವರಿಯಾಗಿರುವುದು ಕಂಡು ಬಂದಿದೆ. ಸರ್ವೆ ಮಾಡಿ, ಒತ್ತುವರಿಯನ್ನು ತೆರವುಗೊಳಿಸಲು ಪ್ರತಿಯೊಂದು ಜಿಲ್ಲೆಯ ಅಧಿಕಾರಿಗ'ಳಿಗ' ಸೂಚನೆ ನೀಡಲಾಗಿದೆ. ದೇವಾಲಯದಲ್ಲಿ ಭಕ್ತರಿಗೆ ದರ್ಶನ ಪಡೆಯಲು, ಪ್ರಸಾದ ಸ್ವೀಕಾರಕ್ಕೆ ಮತ್ತು ವಸತಿ ವಿಚಾರದಲ್ಲಿ ತೊಂದರೆಯಾಗಬಾರದು. ದೇವಸ್ಥಾನಕ್ಕೆ ಬರುವ ಹಣವನ್ನು ಪ್ರಾಧಿಕಾರದ ಅನುಮತಿ ಪಡೆದು ಖರ್ಚು ಮಾಡಬೇಕು ಎಂದು ಸೂಚಿಸಿದ್ದೇವೆ. ಯಾವುದೇ ಕಾರಣಕ್ಕೂ ಅನಗತ್ಯವಾಗಿ ಖರ್ಚು ಮಾಡಲು ಬಿಡುವುದಿಲ್ಲ. ಕಟ್ಟುನಿಟ್ಟಿನ ಕ್ರಮ ತೆಗೆದುಕೊಳ್ಳುತ್ತೇವೆ. ಎಸ್‌ಒಪಿ, ನಿಯಮಗಳನ್ನು ರೂಪಿಸುತ್ತೇವೆ ಎಂದು ತಿಳಿಸಿದರು.

ಇನ್ನೂ ಕ್ರೀಡಾ ಇಲಾಖೆಗೆ ಸಂಬಂಧಿಸಿದಂತೆ ನಮ್ಮ ಸರ್ಕಾರ ಹೆಚ್ಚಿನ ಆದ್ಯತೆ ನೀಡಲಿದೆ. ಮೂಲಸೌಕರ್ಯ ವ್ಯವಸ್ಥೆ ಕಡಿಮೆ ಇರುವ ಜಿಲ್ಲಾ ಮಟ್ಟದ ಶಾಲಾ–ಕಾಲೇಜುಗಳಲ್ಲಿ ಕ್ರೀಡೆಗೆ ಹೆಚ್ಚಿನ ಪ್ರೋತ್ಸಾಹ ಸಿಗುವಂತೆ ಮಾಡಲಾಗುವುದು. ಕ್ರೀಡಾಪಟುಗಳಿಗೆ ಎಲ್ಲಾ ರೀತಿಯ ಸಹಕಾರವನ್ನು ನೀಡುತ್ತೇವೆ. ಗೃಹ ಇಲಾಖೆಯ ನೇಮಕಾತಿಯಲ್ಲಿ ಶೇ. 3ರಷ್ಟು ಮತ್ತು ಬೇರೆ ಇಲಾಖೆಗಳ ನೇಮಕಾತಿಯಲ್ಲಿ ಶೇ. 2ರಷ್ಟು ಮೀಸಲಾತಿ ನೀಡಲಾಗುವುದು ಎಂದರು.

ಬರ ಘೋಷಣೆ ಮಾಡುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಬರ ತಾಲ್ಲೂಕು ಅಥವಾ ಜಿಲ್ಲೆ ಎಂದು ಘೋಷಣೆ ಮಾಡಲು ಮಾನದಂಡಗಳಿವೆ. ಮಳೆ ಬೀಳದಿರುವುದು, ಬೆಳೆ ನಷ್ಟ, ನೀರಿನ ಮಟ್ಟ ಲೆಕ್ಕ ಹಾಕಿ ಘೋಷಣೆ ಮಾಡಲಾಗುತ್ತದೆ. ಈ ಬಗ್ಗೆ ಸದ್ಯ ಚರ್ಚೆ ನಡೆದಿಲ್ಲ. ಮೋಡ ಬಿತ್ತನೆ ಬಗ್ಗೆ ಚಿಂತನೆ ಇಲ್ಲ. ಸಂದರ್ಭ ನೋಡಿಕೊಂಡು ಮಾಡಲಾಗುವುದು ಎಂದು ಸ್ಪಷ್ಟಪಡಿಸಿದರು.

ಪ್ರತಿ ಬಾರಿ ಇಂತಹ ಪರಿಸ್ಥಿತಿ ಎದುರಾದಾಗ ಕೇಂದ್ರದ ಗಮನಕ್ಕೆ ತರುತ್ತೇವೆ. ರಾಜಕೀಯವಾಗಿ ಮಾತನಾಡಲು ಹೋಗುವುದಿಲ್ಲ. ನಾವು ಕೊಟ್ಟ ವರದಿಗೆ ಶೇ. 10ರಷ್ಟು ಪರಿಹಾರ ಕೇಂದ್ರದಿಂದ ಸಿಕ್ಕಿಲ್ಲ ಎಂದು ಕೇಂದ್ರದ ಅಸಹಕಾರದ ಬಗ್ಗೆ ಉಪ ಮುಖ್ಯಮಂತ್ರಿಗಳು ಬೇಸರ ವ್ಯಕ್ತಪಡಿಸಿದರು.

# ಸಿದ್ದಾರ್ಥ ಮಾಧ್ಯಮ ಅಧ್ಯಯನ ಕೇಂದ್ರದಲ್ಲಿ ಪತ್ರಿಕಾ ದಿನಾಚರಣೆ



ತುಮಕೂರು: ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರ, ರೇಡಿಯೋ ಸಿದ್ಧಾರ್ಥ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ "ಪತ್ರಿಕಾ ದಿನಾಚರಣೆ"ಯನ್ನು ನಗರದ ಸಿದ್ಧಾರ್ಥ ರೇಡಿಯೋ ಆವರಣದಲ್ಲಿ ಆಚರಣೆ ಮಾಡಲಾಯಿತು.

ರೇಡಿಯೋ ಸಿದ್ಧಾರ್ಥ ಆವರಣದಲ್ಲಿ ಪತ್ರಿಕಾ ದಿನಾಚರಣೆಗೆ ಗಿಡಕ್ಕೆ ನೀರು ಹಾಕುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಇದೇ ವೇಳೆ ಸಿದ್ಧಾರ್ಥ ಕಾಲೇಜಿನ ಪದವಿ ವಿದ್ಯಾರ್ಥಿ ನಂದೀಶ್ ನಾಯಕ ಸಿದ್ದಪಡಿಸಿದ್ದ ಪ್ರಾಯೋಗಿಕ ಪತ್ರಿಕೆಯನ್ನು ಬಿಡುಗಡೆ ಮಾಡಲಾಯಿತು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿಯಾದ ರಘುರಾಮ್ ರವರು ಮಾತನಾಡಿ ಪತ್ರಿಕಾ ದಿನವನ್ನು ಕೇವಲ ಆಚರಣೆಗೆ ಸೀಮಿತವಾಗಿಸಿಕೊಳ್ಳದೆ. ಪತ್ರಿಕೆಯ ಮೌಲ್ಯವನ್ನು ಅರಿತುಕೊಳ್ಳಬೇಕು. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ವಿಚಾರ ಸಂಕಿರಣ ಮತ್ತು ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಪತ್ರಕರ್ತ ಬೆಳಗೆರೆ ಜಯಣ್ಣ, ಪ್ರಸ್ತುತ ದಿನದಲ್ಲಿ ಪತ್ರಕರ್ತರು ಎಲ್ಲಾ ವಿಭಾಗದಲ್ಲೂ ಕೂಡ ಕೆಲಸ ಮಾಡಲು ಕಲಿಯಬೇಕು. ಕೇವಲ ಬರವಣಿಗೆ ಅಥವಾ ನಿರೂಪಣೆಗೆ ಸೀಮಿತವಾಗದೆ ಮಾಧ್ಯಮ ಕ್ಷೇತ್ರದ ಎಲ್ಲಾ ವಿಭಾಗದ ಕೆಲಸಗಳನ್ನು ಕಲಿಯಬೇಕು ಎಂದು ಮಾಧ್ಯಮ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಇದೇ ಸಂದರ್ಭದಲ್ಲಿ ತುಮಕೂರಿನ ಜಂಟಿ ಕೃಷಿ ನಿರ್ದೇಶಕರಾದ ಲಕ್ಷ್ಮಣ. ಎಸ್. ಕಳ್ಳೆನ್ನವರ, ಮಧುಗಿರಿ ವಿಭಾಗದ, ಉಪ ಕೃಷಿ ನಿರ್ದೇಶಕರಾದ ಎಚ್. ಎಲ್. ಚಂದ್ರಕುಮಾರ್, ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರದ ನಿರ್ದೇಶಕರಾದ ಡಾ. ಬಿ. ಟಿ ಮುದ್ದೇಶ್, ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

# ಅಬ್ದುಲ್ ಕಲಾಂ ಕ್ರಿಕೆಟ್ ಪಂದ್ಯಾವಳಿ ಸಮಾರೋಪ

## ವಿಜೇತರಿಗೆ ಶಾಸಕ ಸಿ.ಬಿ.ಸುರೇಶ್ ಬಾಬು ಅವರಿಂದ ಬಹುಮಾನ ವಿತರಣೆ



ಹುಳಿಯಾರು: ಸ್ಥಳೀಯ ಕೆ.ಪಿ.ಎಸ್. ಶಾಲಾ ಆವರಣದಲ್ಲಿ ಮುಸಲ್ಮಾನ್ ಯುವಕ ಮಿತ್ರರು ಹಮ್ಮಿಕೊಂಡಿದ್ದ 'ಎಪಿಜೆ ಅಬ್ದುಲ್ ಕಲಾಂ ಕ್ರಿಕೆಟ್ ಪಂದ್ಯಾವಳಿ'ಯ ಸಮಾರೋಪ ಸಮಾರಂಭ ಅತ್ಯಂತ ಯಶಸ್ವಿಯಾಗಿ ಜರುಗಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಶಾಸಕರಾದ ಸಿ.ಬಿ.ಸುರೇಶ್ ಬಾಬು ಅವರು ವಿಜೇತ ತಂಡಗಳ ಆಟಗಾರರಿಗೆ ಬಹುಮಾನ ವಿತರಿಸಿ, ಸನ್ಮಾನಿಸಿ ಗೌರವಿಸಿದರು.

ಬಳಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಶಾಸಕ ಸಿ.ಬಿ.ಸುರೇಶ್ ಬಾಬು ಅವರು, ಇಂದಿನ ಯುವ ಪೀಳಿಗೆಯು ಕ್ರೀಡೆಗಳತ್ತ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳುವುದು ಅತ್ಯಗತ್ಯ. ಕ್ರೀಡೆಗಳು ಕೇವಲ ದೈಹಿಕ ಸಾಮರ್ಥ್ಯವನ್ನು ಹೆಚ್ಚಿಸುವುದಲ್ಲದೆ, ವ್ಯಕ್ತಿಯಲ್ಲಿ ಆತ್ಮವಿಶ್ವಾಸ, ಶಿಸ್ತು ಹಾಗೂ ನಾಯಕತ್ವದ ಅದ್ಭುತ ಗುಣಗಳನ್ನು ವೃದ್ಧಿಸುತ್ತವೆ ಎಂದು ತಿಳಿಸಿದರು.

ಸ್ಪರ್ಧೆಯಲ್ಲಿ ಭಾಗವಹಿಸಿದ್ದ ಎಲ್ಲಾ ತಂಡಗಳ ಆಟಗಾರರನ್ನು ಶಾಸಕರು ಮುಕ್ತಕಂಠದಿಂದ ಅಭಿನಂದಿಸಿದರು. ಪಂದ್ಯಾವಳಿಯನ್ನು ಅತ್ಯಂತ ಯಶಸ್ವಿಯಾಗಿ ಆಯೋಜಿಸಿದ 'ಮುಸಲ್ಮಾನ್ ಯುವಕ ಮಿತ್ರರು' ಸಂಘಟನೆಯ ಕಾರ್ಯವೈಖರಿಗೆ ಪ್ರಶಂಸೆ ವ್ಯಕ್ತಪಡಿಸಿದ ಅವರು, ಟೂರ್ನಿಯು ಯಶಸ್ವಿಯಾಗಿ ನೆರವೇರಿದ ಹಿನ್ನೆಲೆಯಲ್ಲಿ ಇಡೀ ತಂಡಕ್ಕೆ ಶುಭ ಹಾರೈಸಿದರು.

ವೇದಿಕೆಯಲ್ಲಿ ಪಟ್ಟಣ ಪಂಚಾಯಿತಿ ಸದಸ್ಯೆ ಬೀಬೀ ಫಾತೀಮಾ, ಗ್ರಾಪಂ ಮಾಜಿ ಸದಸ್ಯ ಹಾರೂನ್, ಡಿಶ್‌ಬಾಬು, ಯುವ ಕಾಂಗ್ರೆಸ್ ಅಧ್ಯಕ್ಷ ಯೋಗೀಶ್, ದೊರೆರಾಘು, ಇಮ್ರಾಜ್, ರವಿ, ಸೇರಿದಂತೆ ಮುಸಲ್ಮಾನ್ ಸಮುದಾಯದ ಮುಖಂಡರು, ಹಾಗೂ ಕ್ರೀಡಾ ಪ್ರೇಮಿಗಳು ಉಪಸ್ಥಿತರಿದ್ದರು.

## ರೇಡಿಯೋ ಸಿದ್ಧಾರ್ಥದಲ್ಲಿ 'ಕೃಷಿ ಕಣಜ' ಬಾನುಲಿ ಸರಣಿ ಕಾರ್ಯಕ್ರಮ

# ಆಧುನಿಕ ಕೃಷಿ ಪದ್ದತಿಗಳ ಬಳಕೆಗೆ ಜಿಲ್ಲಾಧಿಕಾರಿ ಕರೆ



ತುಮಕೂರು: ಕೃಷಿ ಇಲಾಖೆ ಮತ್ತು ರೇಡಿಯೋ ಸಿದ್ಧಾರ್ಥ 90.8 ಎಫ್.ಎಂ. ಹಾಗೂ ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರ ಸಹಯೋಗದಲ್ಲಿ "ಕೃಷಿ ಕಣಜ" ಬಾನುಲಿ ಸರಣಿ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿಗಳಾದ ಶುಭ ಕಲ್ಯಾಣ್ ಅವರು ಚಾಲನೆ ಬುಧುವಾರದಂದು ನೀಡಿದರು.

ನಗರದ ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರದ ಸಿದ್ಧಾರ್ಥ ರೇಡಿಯೋ ಆವರಣದಲ್ಲಿ ಆಯೋಜನೆ ಮಾಡಲಾಗಿದ್ದ ಕೃಷಿ ಇಲಾಖೆಯ ಯೋಜನೆಗಳು ಮತ್ತು ತಾಂತ್ರಿಕ ಮಾಹಿತಿ ಸರಣಿ ಸಂವಹನ ಕಾರ್ಯಕ್ರಮ 'ಕೃಷಿ ಕಣಜ' ಬಾನುಲಿ ಸರಣಿಗೆ ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದ ಶುಭ ಕಲ್ಯಾಣ್ ಅವರು 30 ದಿನಗಳ ಸರಣಿ ಕಾರ್ಯಕ್ರಮಕ್ಕೆ ಕೃಷಿ ಇಲಾಖೆಯ ವಿವಿಧ ಅಧಿಕಾರಿಗಳನ್ನು ಕರೆಸಿ ಕಾರ್ಯಕ್ರಮ ಮಾಡುತ್ತಿರುವುದು ಶ್ಲಾಘನೀಯ ಎಂದರು.

ರೈತರಿಗೆ ಕೃಷಿ ಉಪಕರಣಗಳನ್ನು ಜಿಲ್ಲಾಡಳಿತ ಹಾಗೂ ಕೃಷಿ ಇಲಾಖೆ ವತಿಯಿಂದ ಈಗಾಗಲೇ ವಿತರಣೆ ಮಾಡಲಾಗಿದೆ ಎಂದು ತಿಳಿಸಿದ ಅವರು, ಜಿಲ್ಲೆಯಲ್ಲಿ ಮಳೆಯ ಪ್ರಮಾಣ ಕಡಿಮೆ ಇದ್ದರು ಕೂಡ ರೈತರು ನೀರಾವರಿ ಪದ್ಧತಿ ಹಾಗೂ ಹನಿ ನೀರಾವರಿ ಪದ್ಧತಿಯಿಂದ ಬೆಳೆಗಳನ್ನು ಬೆಳೆಯುತ್ತಿದ್ದಾರೆ. ಎತ್ತಿನಹೊಳೆ ಮತ್ತು ಹೇಮಾವತಿ ಲಿಂಕ್ ಕೆನಾಲ್ ಯೋಜನೆಗಳ ಕಾಮಗಾರಿ ತ್ವರಿತ ಗತಿಯಲ್ಲಿ ಸಾಗಿದ್ದು, ಈ ವರ್ಷವೇ ಪ್ರಾರಂಭವಾಗುವ ನಿರೀಕ್ಷೆ ಇದೆ. ಇದರಿಂದ ಜಿಲ್ಲೆಯ ರೈತರಿಗೆ ಅನುಕೂಲವಾಗುತ್ತದೆ ಎಂದರು.

ರೇಡಿಯೋ ಸಿದ್ಧಾರ್ಥ ಸಮುದಾಯ ಬಾನುಲಿ ಆಗಿ ಜಿಲ್ಲೆಯಾದ್ಯಂತ ಕೃಷಿಕರನ್ನು ತಲುಪಬೇಕು. ಜಿಲ್ಲಾಡಳಿತ ಹಾಗೂ ಕೃಷಿ ಇಲಾಖೆಯಿಂದ ಈಗಾಗಲೇ ಸಾಕಷ್ಟು ಕಾರ್ಯಕ್ರಮಗಳನ್ನು ರೈತರಿಗೆ ತಲುಪಿಸುವ ನಿಟ್ಟಿನಲ್ಲಿ ಕೆಲಸಮಾಡಲಾಗುತ್ತಿದೆ. ಸಾಮಾಜಿಕ ಮಾಧ್ಯಮಗಳ ಮೂಲಕ ಕೃಷಿ ಯೋಜನೆಗಳು ಮತ್ತು ಅದರ ಸದುಪಯೋಗಗಳನ್ನು ಹೇಗೆ ಬಳಸಬೇಕು ಎಂಬುದರ ಅರಿವನ್ನು ಸಾಮಾಜಿಕ ಜಾಲತಾಣಗಳ ಮೂಲಕ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡುವ ಅಗತ್ಯವಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಒತ್ತಿ ಹೇಳಿದರು.

ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರಾದ ಲಕ್ಷ್ಮಣ. ಎಸ್. ಕಳ್ಳೆನ್ನವರ ರವರು ಮಾತನಾಡಿ, ಕೃಷಿ ಸಮುದಾಯಕ್ಕಾಗಿ ಕೃಷಿ ಇಲಾಖೆ ಮತ್ತು ರೇಡಿಯೋ ಸಿದ್ಧಾರ್ಥ ವತಿಯಿಂದ "ಸರಣಿ ಬಾನುಲಿ" ಕಾರ್ಯಕ್ರಮ ಮಾಡುತ್ತಿದ್ದು, ರೈತರಿಗೆ ಬೆಳೆಗಳಿಗೆ ಸಂಬಂಧಪಟ್ಟ ಕಾರ್ಯಕ್ರಮ, ಕೃಷಿ ಸಮಸ್ಯೆಗಳಿಗೆ ಪರಿಹಾರ ಸೇರಿದಂತೆ ಹಲವು ಕೃಷಿ ಕಾರ್ಯಕ್ರಮಗಳನ್ನು ಪ್ರಸಾರ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಮಧುಗಿರಿ ವಿಭಾಗದ ಉಪ ಕೃಷಿ ನಿರ್ದೇಶಕರಾದ ಎಚ್. ಎಲ್. ಚಂದ್ರಕುಮಾರ್, ಶ್ರೀ ಸಿದ್ಧಾರ್ಥ ಮಾಧ್ಯಮ ಅಧ್ಯಯನ ಕೇಂದ್ರದ ನಿರ್ದೇಶಕರಾದ ಡಾ. ಬಿ. ಟಿ ಮುದ್ದೇಶ್, ಶ್ರೀ ಸಿದ್ಧಾರ್ಥ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಹೇಮಲತಾ, ಕೃಷಿ ಇಲಾಖೆಯ ಅಧಿಕಾರಿಗಳು, ಉಪನ್ಯಾಸಕರು, ಹಾಗೂ ಮಾಧ್ಯಮ ವಿದ್ಯಾರ್ಥಿಗಳು ಹಾಜರಿದ್ದರು.

# ಜು.5ರಂದು ತಲೆಗೆ ಬಿದ್ದ ಏಟು ಕೃತಿ ಬಿಡುಗಡೆ

ತುಮಕೂರು: ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಕರ್ನಾಟಕ ಲೇಖಕಿಯರ ಸಂಘದ ಜಿಲ್ಲಾ ಶಾಖೆ, ಅಮೂಲ್ಯ ಪುಸ್ತಕ ಪ್ರಕಾಶನದ ಸಹಯೋಗದಲ್ಲಿ ಡಾ.ನಾಗರಾಜು ಜಿ.ಬಿ ಬೈರೇನಹಳ್ಳಿ ಅವರ 'ತಲೆಗೆ ಬಿದ್ದ ಏಟು' ಕೃತಿ ಬಿಡುಗಡೆ ಸಮಾರಂಭವನ್ನು ಜು.5ರಂದು ಭಾನುವಾರ ಬೆಳಗ್ಗೆ 10 ಗಂಟೆಗೆ ನಗರದ ಕನ್ನಡ ಭವನದಲ್ಲಿ ಏರ್ಪಡಿಸಲಾಗಿದೆ.

ಹಿರಿಯ ಸಾಹಿತಿ ನಾಡೋಜ ಪ್ರೊ. ಬರಗೂರು ರಾಮಚಂದ್ರಪ್ಪ ಕೃತಿ ಬಿಡುಗಡೆಗೊಳಿಸುವರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಸ್.ಸಿದ್ದಲಿಂಗಪ್ಪ ಸಮಾರಂಭದ ಅಧ್ಯಕ್ಷತೆ ವಹಿಸುವರು. ಹಿರಿಯ ಪತ್ರಕರ್ತ ಹಾಗೂ ಲೇಖಕ ಚ.ಹ.ರಘುನಾಥ್, ಜಿಲ್ಲಾ ಲೇಖಕಿಯರ ಸಂಘದ ನಿಕಟಪೂರ್ವ ಅಧ್ಯಕ್ಷೆ ಮಲ್ಲಿಕಾ ಬಸವರಾಜ ಕೃತಿಯ ಕುರಿತು ಮಾತನಾಡುವರು. ಜಿಲ್ಲಾ ಲೇಖಕಿಯರ ಸಂಘದ ಅಧ್ಯಕ್ಷೆ ಆಶಾರಾಣಿ ಬಗ್ಗನಡು, ಅಮೂಲ್ಯ ಪುಸ್ತಕ ಪ್ರಕಾಶನದ ಕೃಷ್ಣ ಚೆಂಗಡಿ, ತಲೆಗೆ ಬಿದ್ದ ಏಟು ಕೃತಿಯ ಲೇಖಕ ಡಾ.ನಾಗರಾಜು ಜಿ.ಬಿ ಬೈರೇನಹಳ್ಳಿ

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.